ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೫೪

**ಪಟ್ಟಿ – ೦೨**

# ಕರ್ನಾಟಕ ವಿಧಾನ ಪರಿಷತ್ತು

**ನೂರ ನಲವತ್ತನೆಯ ಅಧಿವೇಶನ**
**ಮಂಗಳವಾರ, ದಿನಾಂಕ : ೦೩ನೇ ಮಾರ್ಚ್, 2020**

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೩. ನಗರಾಭಿವೃದ್ಧಿ ಸಚಿವರು.

೪. ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು.

೫. ಗಣಿ ಮತ್ತು ಭೂವಿಜ್ಞಾನ ಸಚಿವರು.

೬. ಸಹಕಾರ ಸಚಿವರು.

---

## ಕೆ.ಎ.ಐ.ಡಿ.ಬಿ ವತಿಯಿಂದ ರಾಜ್ಯದಲ್ಲಿ ಕೈಗಾರಿಕಾ ಅಭಿವೃದ್ಧಿಗಾಗಿ ವಶಪಡಿಸಿಕೊಳ್ಳಲಾದ ಜಮೀನಿನ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧ (೧೪೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೧೦ ವರ್ಷಗಳಲ್ಲಿ ಕೆ.ಎ.ಐ.ಡಿ.ಬಿ ವತಿಯಿಂದ ರಾಜ್ಯದಲ್ಲಿ ಕೈಗಾರಿಕಾ ಅಭಿವೃದ್ಧಿಗಾಗಿ ವಶಪಡಿಸಿಕೊಳ್ಳಲಾದ ಜಮೀನಿನ ವಿಸ್ತೀರ್ಣವೆಷ್ಟು ; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೈಗಾರಿಕೆಗಳನ್ನು ಉತ್ತೇಜಿಸಲು ಕೈಗಾರಿಕೋದ್ಯಮಿಗಳಿಗೆ ನೀಡಲಾಗಿರುವ ರಿಯಾಯಿತಿಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಮಂಡ್ಯ ಜಿಲ್ಲೆಯಲ್ಲಿ ಯಾವ ಯಾವ ವಿಧದ ಕೈಗಾರಿಕೆಗಳನ್ನು ಸ್ಥಾಪಿಸಲು ಕೈಗಾರಿಕಾ ಫ್ಲಾಟ್‌ಗಳನ್ನು ನೀಡಲಾಗಿದೆ ;

(ಈ) ಕೈಗಾರಿಕೆಗಳನ್ನು ಸ್ಥಾಪಿಸಲು ಈಗಾಗಲೇ ವಿತರಿಸಲಾಗಿರುವ ಕೈಗಾರಿಕಾ ಶೆಡ್ಡುಗಳ ಸಂಖ್ಯೆ ಎಷ್ಟು ; ಈ ಶೆಡ್ಡುಗಳನ್ನು ಯಾವ ಮಾನದಂಡದ ಮೇಲೆ ವಿತರಿಸಲಾಗಿರುತ್ತದೆ ;

(ಉ) ಉದ್ಯಮಗಳನ್ನು ನಡೆಸಲು ನೀಡಲಾಗಿರುವ ಜಮೀನುಗಳಲ್ಲಿ ಈವರೆವಿಗೂ ಉದ್ಯಮಗಳನ್ನು ಸ್ಥಾಪಿಸದಿರುವ ಉದ್ಯಮಿಗಳ ಸಂಖ್ಯೆ ಎಷ್ಟು ; ಇವರುಗಳ ಮೇಲೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಊ) ರಾಜ್ಯದಲ್ಲಿ ಉದ್ಯಮಗಳನ್ನು ಸ್ಥಾಪಿಸದೆ ಅನ್ಯ ಉದ್ದೇಶಕ್ಕಾಗಿ ಜಮೀನನ್ನು ಬಳಸಿಕೊಂಡಿರುವ ಪ್ರಕರಣಗಳೆಷ್ಟು ; ಹಾಗಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿ ಅನುಮತಿ ನೀಡಿರುವ ಗಣಿ ಗುತ್ತಿಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೧೨ (೧೬೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಯಾವ ಯಾವ ರೀತಿಯ ಗಣಿಗಾರಿಕೆಯ ಗುತ್ತಿಗೆಗಳನ್ನು ಎಲ್ಲೆಲ್ಲಿ ಯಾರ್ಯಾರಿಗೆ ನೀಡಲಾಗುತ್ತಿದೆ ; (ವಿವರ ನೀಡುವುದು)

(ಆ) ಇದಕ್ಕೆ ಅನುಸರಿಸಿರುವ ಮಾನದಂಡಗಳೇನು ;

(ಇ) ಗಣಿ ಗುತ್ತಿಗೆ ಹರಾಜಿನಿಂದ ರಾಜ್ಯ ಸರ್ಕಾರಕ್ಕೆ ಬರುವ ಆದಾಯ ಎಷ್ಟು ;

(ಈ) ಸದರಿ ಗಣಿ ಗುತ್ತಿಗೆಯಿಂದ ತೆಗೆಯಲಾದ ಗಣಿ ಸಾಮಗ್ರಿ ಎಷ್ಟು; ಇದನ್ನು ಎಲ್ಲೆಲ್ಲಿಗೆ ಯಾವ ಉದ್ದೇಶಕ್ಕೆ ಬಳಸಲಾಗಿದೆ ; ರಫ್ತು ಮಾಡಲಾಗಿದೆ ? (ಕಂಪನಿಗಳವಾರು, ಖನಿಜದ ಪ್ರಮಾಣವಾರು ವಿವರ ಒದಗಿಸುವುದು)

## ಅಕ್ರಮ ಗಣಿಗಾರಿಕೆಯನ್ನು ತಡೆಯುವ ಬಗ್ಗೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :-**

೧೧೩ (೧೬೬) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಾನ್ಯ ಗಣಿ ಮತ್ತು ಭೂವಿಜ್ಞಾನ ಇಲಾಖೆಯಿಂದ ಪರವಾನಗಿ ಪಡೆಯದೆ ಗಣಿಗಾರಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ; (ಪೂರ್ಣ ವಿವರ ನೀಡುವುದು)

(ಇ) ಅಕ್ರಮವಾಗಿ ಗಣಿಗಾರಿಕೆ ನಡೆಸುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ನಷ್ಟ ಉಂಟಾಗುತ್ತಿಲ್ಲವೆ ; ಇದ್ದಲ್ಲಿ, ಎಷ್ಟು ನಷ್ಟವಾಗಿದೆ;

(ಈ) ಮರಳು ಮತ್ತು ಗಣಿಗೆ ಯಾವ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ; ಪ್ರತ್ಯೇಕ ನಿಯಮಗಳನ್ನು ರೂಪಿಸಲಾಗಿದೆಯೇ ; ಸಮರ್ಪಕವಾಗಿ ಅನುಷ್ಠಾನ ಆಗುತ್ತಿದೆಯೇ ? (ವಿವರ ನೀಡುವುದು)

## ನ್ಯಾಯಬೆಲೆ ಅಂಗಡಿಗಳ ನಿರ್ವಹಣೆ

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೧೪ (೧೬೭) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಇಲ್ಲಿಯವರೆಗೆ ರಾಜ್ಯದಲ್ಲಿ ಹೊಸದಾಗಿ ಮಂಜೂರಾಗಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ;

(ಆ) ಮಂಜೂರಾದ ನ್ಯಾಯಬೆಲೆ ಅಂಗಡಿಗಳಲ್ಲಿ ಪ್ರಾರಂಭವಾದ ಅಂಗಡಿಗಳ ಸಂಖ್ಯೆ ಎಷ್ಟು ; ಪ್ರಾರಂಭವಾಗದಿದ್ದಲ್ಲಿ, ಕಾರಣಗಳೇನು ;

(ಇ) ನ್ಯಾಯಬೆಲೆ ಅಂಗಡಿ ತೆರೆಯಲು ಇರುವ ಮಾನದಂಡ/ ನಿಯಮಗಳೇನು ?

## ಸಾಲ ಮನ್ನಾ ಮಾಡುವುದು

**ಶ್ರೀ ಎಸ್.ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ) :–**

೧೧೫ (೯೧) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ ಹಾಗೂ ೨೦೧೯–೨೦ನೇ ಸಾಲಿನಲ್ಲಿ ರಾಜ್ಯದಲ್ಲಿ ಇಲ್ಲಿಯವರೆಗೆ ಎಷ್ಟು ರೈತರ ಸಾಲ ಮನ್ನಾ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಸರ್ಕಾರಿ, ಅರೆ ಸರ್ಕಾರಿ, ಖಾಸಗಿ, ಕೇಂದ್ರ ಸರ್ಕಾರದ ಬ್ಯಾಂಕ್‌ಗಳು ಮತ್ತು ಸಹಕಾರ ಬ್ಯಾಂಕ್‌ಗಳಲ್ಲಿ ರೈತರ ಬೆಳೆ ಸಾಲ ಮತ್ತು ಅದರ ಬಡ್ಡಿ ಸೇರಿ ಎಷ್ಟು ರೈತರು ಸಾಲ ಪಡೆದಿದ್ದಾರೆ ; (ಜಿಲ್ಲಾವಾರು ವಿವರ ನೀಡುವುದು)

(ಇ) ರೈತರ ಸಾಲ ಮನ್ನಾ ಮಾಡಲು ಇರುವ ಮಾನದಂಡ ಏನು ಹಾಗೂ ಯಾವ ಬೆಳೆಗಳಿಗೆ ಸಾಲ ಮನ್ನಾ ಮಾಡಲಾಗಿದೆ ; (ವಿವರ ಒದಗಿಸುವುದು)

(ಈ) ಕಳೆದ ೫ ವರ್ಷಗಳಲ್ಲಿ ಮೀನುಗಾರರ ಹಾಗೂ ನೇಕಾರರ ಸಾಲ ಮನ್ನಾ ಮಾಡಲಾಗಿದೆಯೇ ;

(ಉ) ಮಾಡಿದ್ದಲ್ಲಿ, ಎಷ್ಟು ಸಾಲ ಮನ್ನಾ ಮಾಡಲಾಗಿದೆ ; (ಜಿಲ್ಲಾವಾರು, ಬ್ಯಾಂಕ್‌ವಾರು ವಿವರ ಒದಗಿಸುವುದು) ಮಾಡದಿದ್ದಲ್ಲಿ, ಕಾರಣ ಏನು ; ಎಷ್ಟು ಸಮಯದೊಳಗೆ ಮಾಡಲಾಗುವುದು ?

## ರಾಯಚೂರಿನ ಕುಡಿಯುವ ನೀರಿನ ಯೋಜನೆ

**ಶ್ರೀ ಎನ್.ಎಸ್. ಭೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೧೬ (೧೫೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) KUWS ವತಿಯಿಂದ ರಾಯಚೂರು ನಗರದಲ್ಲಿ ಕುಡಿಯುವ ನೀರಿಗಾಗಿ ಹಮ್ಮಿಕೊಂಡಿರುವ ಯೋಜನೆಗಳು ಯಾವುವು ;

(ಆ) ರಾಯಚೂರು ನಗರದಲ್ಲಿ ಕುಡಿಯುವ ನೀರಿನ ಸರಬರಾಜು ೨೪/೭ ಯೋಜನೆ ಕಾಲಮಿತಿಯಲ್ಲಿ ಕಾಮಗಾರಿ ಪೂರೈಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ರಾಯಚೂರು ಹೊರಭಾಗದಲ್ಲಿ ರಿಂಗ್ ರಸ್ತೆ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಯಚೂರು ನಗರದಲ್ಲಿ ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರು ಜಿಲ್ಲೆಯಲ್ಲಿ ಬರುವ ಪಟ್ಟಣ ಪಂಚಾಯಿತಿಗಳ ಬಗ್ಗೆ

**ಶ್ರೀ ಎನ್.ಎಸ್. ಭೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೧೧೭ (೧೫೧) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೮-೧೯ ರಿಂದ ೨೦೧೯-೨೦ನೇ ಸಾಲಿನಲ್ಲಿ ರಾಯಚೂರು ನಗರ ಸಭೆಗೆ ಮಂಜೂರಾತಿ ಆಗಿರುವ ಅನುದಾನ ಎಷ್ಟು ; ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು ;

(ಆ) ರಾಯಚೂರು ಜಿಲ್ಲೆಯಲ್ಲಿ ಬರುವ ನೂತನ ಪಟ್ಟಣ ಪಂಚಾಯಿತಿಗಳ ಅಭಿವೃದ್ಧಿಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ರಾಯಚೂರಿನಲ್ಲಿ ಇರುವ ವಿಎಸ್‌ಎಸ್‌ಎನ್ ಸಹಕಾರ ಸಂಘಗಳ ಬಗ್ಗೆ

**ಶ್ರೀ ಎನ್.ಎಸ್. ಭೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):-**

೧೧೮ (೧೫೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಯಚೂರಿನಲ್ಲಿ ಇರುವ ವಿ.ಎಸ್‌ಎಸ್‌ಎನ್ ಸಹಕಾರ ಸಂಘಗಳು ಎಷ್ಟು ; ಸಹಕಾರ ಸಂಘಗಳಲ್ಲಿರುವ ಸದಸ್ಯರುಗಳ ಸಂಖ್ಯೆ ಎಷ್ಟು ;

(ಆ) ವಿಎಸ್‌ಎಸ್‌ಎನ್ ಸಹಕಾರ ಸಂಘಗಳ ಮುಖಾಂತರ ಎಷ್ಟು ರೈತರುಗಳಿಗೆ ಸಾಲ ನೀಡಲಾಗಿದೆ ; ಸಾಲದ ಮೊತ್ತ ಎಷ್ಟು ;

(ಇ) ರಾಯಚೂರಿನಲ್ಲಿ ಇರುವ ಡಿಸಿಸಿ ಬ್ಯಾಂಕ್ ಮುಖಾಂತರ ರೈತರುಗಳಿಗೆ ನೀಡಿರುವ ಸಾಲ ಎಷ್ಟು ; ಡಿಸಿಸಿ ಬ್ಯಾಂಕ್‌ನಿಂದ ಕೆಲವು ವಿಎಸ್‌ಎಸ್‌ಎನ್ ಸಹಕಾರ ಸಂಘಗಳಿಗೆ ಹಣ ಮಂಜೂರು ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಈ) ರಾಯಚೂರು ನಗರದಲ್ಲಿ ಸಹಕಾರ ಇಲಾಖೆಯ ಉಪ ನಿಬಂಧಕರುಗಳ ಕಛೇರಿ ಕಟ್ಟಡ ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಅಳತೆ ಮತ್ತು ತೂಕಗಳಲ್ಲಿ ವಂಚಿಸುವುದನ್ನು ತಪ್ಪಿಸುವುದು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೯ (೧೭೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಳತೆ ಮತ್ತು ತೂಕಗಳಲ್ಲಿ ಗ್ರಾಹಕರಿಗೆ ವಂಚಿಸುವ ಮಾರಾಟಗಾರರನ್ನು ತನಿಖೆ ನಡೆಸಿ ಕ್ರಮ ಕೈಗೊಳ್ಳಲು ಯಾವ ಕ್ರಮಗಳನ್ನು ಅನುಸರಿಸಲಾಗುತ್ತದೆ ;

(ಆ) ಅಳತೆ ಮತ್ತು ತೂಕಗಳ ನಿಯಂತ್ರಣ ಇಲಾಖೆಯಲ್ಲಿ ಇನ್‌ಸ್ಪೆಕ್ಟರ್‌ಗಳು ಎಷ್ಟು ಪ್ರಕರಣಗಳನ್ನು ತಪಾಸಣೆ ಮಾಡಿ ದಂಡ ವಿಧಿಸಿದ್ದಾರೆ ; (ಬೆಂಗಳೂರು ನಗರದ ಕಳೆದ ಎರಡು ವರ್ಷಗಳ ಮಾಹಿತಿಯನ್ನು ನೀಡುವುದು)

(ಇ) ಈ ಬಗ್ಗೆ ಕಟ್ಟುನಿಟ್ಟಿನ ಕ್ರಮ ಕೈಗೊಂಡು ಗ್ರಾಹಕರಿಗೆ ಅನ್ಯಾಯವಾಗದಂತೆ ಸರ್ಕಾರ ಯಾವ ರೀತಿ ಕ್ರಮ ಕೈಗೊಳ್ಳುವುದು ?

## ೨೦೧೮ ರಿಂದ ಇಲ್ಲಿಯವರೆಗೆ ಅನ್ನಭಾಗ್ಯ ಯೋಜನೆಯ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೨೦ (೬೩) ಮಾನ್ಯ ಆಹಾರ ಮತ್ತು ನಾಗರಿಕರ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೧೯, ೨೦೧೯-೨೦ ರಲ್ಲಿ ಅನ್ನಭಾಗ್ಯ ಯೋಜನೆ ಅನ್ವಯ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; ಈ ಯೋಜನೆ ಅನ್ವಯ ಪ್ರಸ್ತುತ ನೀಡುವ ಅಕ್ಕಿ ಮತ್ತು ಇತರ ವಸ್ತುಗಳ ವಿವರ ನೀಡುವುದು ;

(ಆ) ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆ ಅನ್ವಯ ಪ್ರಸ್ತುತ ನೀಡುತ್ತಿರುವ ಅಕ್ಕಿ ಮತ್ತು ಇತರ ವಸ್ತುಗಳನ್ನು ಕಡಿತಗೊಳಿಸಲಾಗಿದೆಯೇ ; ಈ ಬಗ್ಗೆ ಸರ್ಕಾರದಿಂದ ಸುತ್ತೋಲೆ ನೀಡಲಾಗಿದೆಯೇ ; ಇದರಿಂದಾಗಿ ಸರ್ಕಾರಕ್ಕೆ ತಗಲುವ ವೆಚ್ಚ ಎಷ್ಟು ;

(ಇ) ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಅಕ್ರಮವಾಗಿ ಮಾರಾಟ ಮಾಡುವವರ ಬಗ್ಗೆ ರಾಜ್ಯದಲ್ಲಿ ಎಷ್ಟು ಪ್ರಕರಣಗಳು ಪತ್ತೆಯಾಗಿದೆ; ಅವರಿಂದ ವಶಪಡಿಸಿಕೊಂಡ ಅಕ್ಕಿ ಎಷ್ಟು ;

(ಈ) ರಾಜ್ಯದಲ್ಲಿ ಎಷ್ಟು ಟನ್ ಅಕ್ಕಿಯನ್ನು ಪ್ರತಿ ತಿಂಗಳು ಒದಗಿಸಲಾಗುತ್ತಿದೆ ; ಎಲ್ಲಿಂದ ಅಕ್ಕಿಯನ್ನು ಖರೀದಿಸಲಾಗುತ್ತದೆ; ಪ್ರಸ್ತುತ ಯಾವ ದರದಲ್ಲಿ ಅಕ್ಕಿಯನ್ನು ಸರ್ಕಾರ ಕೊಂಡುಕೊಳ್ಳುತ್ತದೆ; (ವಿವರ ನೀಡುವುದು)

(ಉ) ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಕಡಿತಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ; ಇದ್ದರೆ ವಿವರ ನೀಡುವುದು ?

## ರಾಜ್ಯದಲ್ಲಿ ಮರಳುಗಾರಿಕೆಗಾಗಿ ಪರವಾನಿಗೆ ನೀಡಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೨೧ (೬೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೮-೧೯, ೨೦೧೯-೨೦ ರಲ್ಲಿ ರಾಜ್ಯದಲ್ಲಿ ಎಷ್ಟು ಮಂದಿಗೆ ಮರಳುಗಾರಿಕೆಗಾಗಿ ಪರವಾನಿಗೆ ನೀಡಲಾಗಿದೆ ;

(ಆ) ಅಕ್ರಮ ಮರಳುಗಾರಿಕೆ ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಎಷ್ಟು ಪ್ರಕರಣಗಳನ್ನು ದಾಖಲಿಸಲಾಗಿದೆ ; ಎಷ್ಟು ದಂಡವನ್ನು ವಸೂಲು ಮಾಡಲಾಗಿದೆ ;

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 'ಸ್ಯಾಂಡ್ ಬಜಾರ್' ಮೂಲಕ ಮರಳು ಖರೀದಿಸುವ ಯೋಜನೆ ಜಾರಿಯಲ್ಲಿದೆಯೇ ; ಇದರಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು ; ಎಷ್ಟು ಟನ್ ಮರಳು ದೊರಕಿಸಿಕೊಡಲಾಗಿದೆ ; (ವಿವರ ನೀಡುವುದು)

(ಈ) ನೆರೆ ರಾಜ್ಯಗಳಿಗೆ ಅಕ್ರಮ ಮರಳು ಸಾಗಾಟ ಮಾಡುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಎಷ್ಟು ಮಂದಿ ಈ ಕೃತ್ಯಗಳಲ್ಲಿ ಭಾಗಿಯಾಗಿದ್ದಾರೆ ; (ವಿವರ ನೀಡುವುದು)

(ಉ) CRZ ಮತ್ತು Non CRZ ವರ್ಗೀಕರಣದಿಂದ ಇಲಾಖೆಗೆ ಆಗಿರುವ ಲಾಭವೇನು ? (ವಿವರ ನೀಡುವುದು)

## ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಂ.ಆರ್.ಪಿ.ಎಲ್, ಯು.ಪಿ.ಸಿ.ಎಲ್. ಗಳಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೨೨ (೧೭) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಎಂ.ಆರ್.ಪಿ.ಎಲ್ ಮತ್ತು ಯು.ಪಿ.ಸಿ.ಎಲ್‌ಗಳಲ್ಲಿ ಎಷ್ಟು ಮಂದಿ ಸ್ಥಳೀಯರಿಗೆ ಉದ್ಯೋಗವನ್ನು ನೀಡಲಾಗಿದೆ; (ವಿವರಗಳನ್ನು ಒದಗಿಸುವುದು)

(ಆ) ಎಂ.ಆರ್.ಪಿ.ಎಲ್. ಮತ್ತು ಯು.ಪಿ.ಸಿ.ಎಲ್ ಕೈಗಾರಿಕೆಗಳಿಗೆ ರಾಜ್ಯ ಸರ್ಕಾರವು ಎಷ್ಟು ಎಕರೆ ಭೂಮಿಯನ್ನು ಒದಗಿಸಲಾಗಿದೆ; ಯಾವ ದರದಲ್ಲಿ ನೀಡಲಾಗಿದೆ; (ವಿವರ ನೀಡುವುದು)

(ಇ) ಎಂ.ಆರ್.ಪಿ.ಎಲ್. ಮತ್ತು ಯು.ಪಿ.ಸಿ.ಎಲ್ ಕೈಗಾರಿಕೆಗಳಿಗೆ ನೀಡಿದ ಭೂಮಿಯನ್ನು ಬೇರೆ ಕಂಪನಿಗಳಿಗೆ ಮಾರಾಟ/ಗುತ್ತಿಗೆ ಆಧಾರದಲ್ಲಿ ನೀಡಿ ರಿಯಲ್ ಎಸ್ಟೇಟ್ ವ್ಯಾಪಾರ ಮಾಡಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ಒದಗಿಸುವುದು)

(ಈ) ರಾಜ್ಯದಲ್ಲಿ ಬಂಡವಾಳ ಆಕರ್ಷಿಸಲು ಇಲಾಖೆ ಕೈಗೊಂಡಿರುವ ಯೋಜನೆಗಳು ಯಾವುವು; ಎಷ್ಟು ಉದ್ಯೋಗಗಳನ್ನು ಸೃಷ್ಟಿ ಮಾಡಲು ಉದ್ದೇಶಿಸಲಾಗಿದೆ ? (ವಿವರ ನೀಡುವುದು)

# ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆದು ೧೮ ತಿಂಗಳು ಕಳೆದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-**

೧೨೩ (೧೯೫) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆದು ೧೮ ತಿಂಗಳು ಕಳೆದರೂ ಆಡಳಿತ ಮಂಡಳಿಯ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಚುನಾವಣೆ ನಡೆಸದಿರಲು ಕಾರಣಗಳೇನು ; ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಸ್ಥಳೀಯ ಸಂಸ್ಥೆಗಳಿಗೆ ಆಡಳಿತ ಮಂಡಳಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಮೀಸಲಾತಿಯನ್ನು ಬಗೆಹರಿಸಲು ಸರ್ಕಾರಕ್ಕಿರುವ ತೊಂದರೆಗಳೇನು ;

(ಇ) ರಾಜ್ಯದಲ್ಲಿ ಎಷ್ಟು ಗ್ರಾಮ ಪಂಚಾಯತ್‌ಗಳನ್ನು ನಗರ ಪಂಚಾಯತ್‌ಗಳನ್ನಾಗಿ, ನಗರ ಸಭೆಗಳನ್ನು ಪುರಸಭೆಗಳನ್ನಾಗಿ ಮೇಲ್ದರ್ಜೆಗೇರಿಸಲು ಸರ್ಕಾರದ ಮುಂದಿರುವ ಪ್ರಸ್ತಾವನೆಗಳಾವುವು; (ವಿವರ ನೀಡುವುದು)

(ಈ) ೨೦೧೭-೧೮, ೨೦೧೮-೧೯ ಮತ್ತು ೨೦೧೯-೨೦ನೇ ಸಾಲಿನಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಸರ್ಕಾರದಿಂದ ಬಿಡುಗಡೆಗೊಳಿಸಿದ ಅನುದಾನ ಎಷ್ಟು ? (ವಿವರ ನೀಡುವುದು)

## IDS MT ಯೋಜನೆಯಡಿ ನಿವೇಶನಗಳನ್ನು ನೀಡಿರುವ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೪ (೬೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಒಳಪಡುವ ಐ.ಡಿ.ಎಸ್.ಎಂ.ಟಿ. ಯೋಜನೆಯಡಿ ಯಾವ ಯಾವ ಬಡಾವಣೆಗಳಲ್ಲಿ ನಿವೇಶನಗಳನ್ನು ನಿರ್ಮಿಸಿ ವಿಂಗಡಿಸಲಾಗಿದೆ;

(ಆ) ಆಯಾ ಬಡಾವಣೆಗಳಲ್ಲಿ ಸದರಿ ಯೋಜನೆಯಡಿ ವಿಂಗಡಿಸಿ ಹಂಚಿಕೆಯಾಗದೆ ಉಳಿದಿರುವ ನಿವೇಶನಗಳ ಸಂಖ್ಯೆ ಎಷ್ಟು ; (ಯಾವ ಯಾವ ಅಳತೆಯ ಎಷ್ಟೆಷ್ಟು ನಿವೇಶನಗಳಿವೆ ಎಂಬ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಯೋಜನೆಯಡಿ ನಿವೇಶನಗಳನ್ನು ಯಾವ ಯಾವ ವರ್ಗದವರಿಗೆ ಎಷ್ಟು ದರವನ್ನು ನಿಗದಿಪಡಿಸಿ ಹಂಚಿಕೆ ಮಾಡಲಾಗಿದೆ ; (ಕಳೆದ ಐದು ವರ್ಷಗಳಿಂದ ಇಲ್ಲಿಯವರೆಗೆ ಹಂಚಿಕೆಯಾದ ನಿವೇಶನಗಳ ಮಾಹಿತಿ ನೀಡುವುದು)

(ಈ) ಐ.ಡಿ.ಎಸ್.ಎಂ.ಟಿ. ಯೋಜನೆಯಡಿ ಉಳಿದಿರುವ ನಿವೇಶನವನ್ನು ಯಾವ ಮಾನದಂಡವನ್ನು ಅನುಸರಿಸಿ ಯಾವಾಗ ಹಂಚಿಕೆ ಮಾಡಲಾಗುವುದು? (ವಿವರ ನೀಡುವುದು)

## ಸ್ಮಾರ್ಟ್ ಸಿಟಿ ಯೊಜನೆಯ ಬಗ್ಗೆ

**ಶ್ರೀ ಕಾಂತರಾಜು (ಬಿ.ಎಂ.ಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೨೫ (೬೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ನಗರವನ್ನು ಸ್ಮಾರ್ಟ್ ಸಿಟಿ ಎಂದು ಘೋಷಣೆ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಇದ್ದಲ್ಲಿ, ಈ ಸ್ಮಾರ್ಟ್ ಸಿಟಿಗೆ ಇಲ್ಲಿಯ ತನಕ ಬಂದಿರುವ ಅನುದಾನವೆಷ್ಟು ; ಬಂದಿದ್ದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಂಡು ಪೂರ್ಣಗೊಳಿಸಲಾಗಿದೆ ; (ವಿವರ ನೀಡುವುದು)

(ಇ) ಪ್ರಾರಂಭ ಮಾಡಿರುವ ಕಾಮಗಾರಿಗಳ ಪೈಕಿ ಪೂರ್ಣಗೊಳಿಸದೆ ಇರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು ; ಇವುಗಳಿಗೆ ಹೆಚ್ಚುವರಿಯಾಗಿ ಅನುದಾನದ ಅಗತ್ಯತೆಯೆಷ್ಟು ; (ವಿವರ ನೀಡುವುದು)

(ಈ) ೨೦೧೮-೧೯ ಮತ್ತು ೨೦೧೯-೨೦ ರಲ್ಲಿ ಸ್ಮಾರ್ಟ್ ಸಿಟಿ ವತಿಯಿಂದ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಇವುಗಳಿಗೆ ಒದಗಿಸಿರುವ ಅನುದಾನವೆಷ್ಟು ; ಹಾಲಿ ಖರ್ಚು ಮಾಡಿರುವ ಹಣವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಉ) ಈ ಎರಡು ವರ್ಷದಲ್ಲಿ ಕೈಗೊಂಡಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಲು ಎಷ್ಟು ಸಮಯವನ್ನು ನೀಡಲಾಗಿದೆ ? (ಸಂಪೂರ್ಣ ಮಾಹಿತಿ ನೀಡುವುದು)

## ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ನಿರ್ಮಿಸಿದ ನಿವೇಶನಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿ.ಎಂ.ಎಲ್) (ಸ್ಥಳಿಯ ಸಂಸ್ಥೆಗಳ ಕ್ಷೇತ್ರ) ಹಾಗೂ ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೨೬ (೭೨+೮೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೧೦ ವರ್ಷಗಳಲ್ಲಿ ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರವು ನಿವೇಶನ ನಿರ್ಮಾಣಕ್ಕಾಗಿ ವಶಪಡಿಸಿಕೊಂಡ ಜಮೀನಿನ ವಿಸ್ತೀರ್ಣವೆಷ್ಟು ; ಈ ಜಮೀನಿನಲ್ಲಿ ನಿರ್ಮಿಸಲಾದ ಒಟ್ಟು

ನಿವೇಶನಗಳೆಷ್ಟು ; ಅವುಗಳಲ್ಲಿ ಯಾವ ಯಾವ ಅಳತೆಗಳಲ್ಲಿ ಎಷ್ಟು ನಿವೇಶನಗಳನ್ನು ನಿರ್ಮಿಸಲಾಗಿರುತ್ತದೆ; (ವರ್ಷಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ವಶಪಡಿಸಿಕೊಂಡ ಜಮೀನಿನ ಮಾಲೀಕರು/ರೈತರಿಗೆ ಪ್ರತಿ ಎಕರೆಗೆ ನೀಡಲಾಗಿರುವ ಪರಿಹಾರ ಧನವೆಷ್ಟು ; ಪರಿಹಾರಕ್ಕೆ ಅನುಸರಿಸಲಾಗಿರುವ ಮಾನದಂಡಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಇಲ್ಲಿಯವರೆಗೂ ನಿವೇಶನ ಹಂಚಿಕೆಗಾಗಿ ಎಷ್ಟು ಬಾರಿ ಅಧಿಸೂಚನೆಯನ್ನು ಹೊರಡಿಲಾಗಿದೆ ; ಪ್ರತಿ ಅಧಿಸೂಚನೆಯಲ್ಲೂ ಯಾವ ಯಾವ ಅಳತೆಯ ನಿವೇಶನಗಳನ್ನು ಹಂಚಿಕೆಗಾಗಿ ಪ್ರಕಟಿಸಲಾಗಿದೆ ; ಹಾಗೂ ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿದವರ ಸಂಖ್ಯೆ ಹಾಗೂ ಹಂಚಿಕೆ ಮಾಡಿ ನಿವೇಶನ ಪಡೆದವರ ಸಂಖ್ಯೆ ಹಾಗೂ ನಿವೇಶನ ಪಡೆಯದಿರುವವರ ಸಂಖ್ಯೆ ಎಷ್ಟು ; ನಿವೇಶನ ಪಡೆಯದಿರುವುದಕ್ಕೆ ಕಾರಣಗಳೇನು ; (ಹೆಸರು ಮತ್ತು ವಿಳಾಸ ಸಹಿತ ಸಂಪೂರ್ಣ ಮಾಹಿತಿ ನೀಡುವುದು)

(ಈ) ನಿವೇಶನ ಹಂಚಿಕೆಗೆ ಪ್ರಾಧಿಕಾರವು ಅನುಸರಿಸಲಾಗಿರುವ ಮಾನದಂಡಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ರೈತರಿಂದ ಭತ್ತ ಖರೀದಿ ಮಾಡುವ ಕುರಿತು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೨೭ (೨೦೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪ್ರತಿ ವರ್ಷ ಕೇಂದ್ರ ಸರ್ಕಾರದ ಆರ್ಥಿಕ ನೆರವಿನೊಂದಿಗೆ ರಾಜ್ಯ ಸರ್ಕಾರವು ರೈತರಿಂದ ಭತ್ತ ಖರೀದಿ ಮಾಡುತ್ತಿದೆಯೇ ;

(ಆ) ಖರೀದಿ ಮಾಡಲಾದ ಭತ್ತವನ್ನು ಸ್ಥಳೀಯ ನೋಂದಾಯಿತ ಅಕ್ಕಿ ಗಿರಣಿಗಳಿಂದ ಭತ್ತವನ್ನು ಹಲ್ಲಿಂಗ್ ಮಾಡಲು ಕ್ವಿಂಟಾಲ್ ಒಂದಕ್ಕೆ ರೂ. ೧೦/– ನಿಗಧಿಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಾದರೆ, ಸದರಿ ದರವನ್ನು ಯಾವ ಸಾಲಿನಿಂದ ನಿಗಧಿಗೊಳಿಸಲಾಗಿದೆ ;

(ಈ) ಸದರಿ ರೂ.೧೦/– ದರವನ್ನು ದೀರ್ಘ ಕಾಲದಿಂದ ಪರಿಷ್ಕರಿಸದಿರಲು ಕಾರಣಗಳೇನು ; (ವಿವರಗಳೊಡನೆ)

(ಉ) ಯಾವ ಕಾಲಮಿತಿಯಲ್ಲಿ ಸದರಿ ದರವನ್ನು ಪರಿಷ್ಕರಿಸಲಾಗುವುದು?

## ನಕಲಿ ಸ್ಮಾರ್ಟ್ ಕಾರ್ಡ್ ಬಗ್ಗೆ (ಪಡಿತರ ಚೀಟಿ ಬಿ.ಪಿ.ಎಲ್/ ಎ.ಪಿ.ಎಲ್)

**ಡಾ. ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೨೮ (೯೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಕಲಿ ಸ್ಮಾರ್ಟ್ ಕಾರ್ಡ್ ಮೂಲಕ ರಾಜ್ಯದ ಪಡಿತರದಾರರಿಗೆ ವಂಚನೆ ನಡೆಯುತ್ತಿದೆ ಎಂದು ಮಾಧ್ಯಮದಲ್ಲಿ ವರದಿಯಾಗಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಇಂತಹ ನಕಲಿ ದಂಧೆಕೋರರ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ತ್ಯಾಜ್ಯ ವಿಲೇವಾರಿ ಸಮರ್ಪಕವಾಗಿ ನಡೆಯದಿರುವ ಕುರಿತು

**ಡಾ. ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೨೯ (೧೯ )ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ತ್ಯಾಜ್ಯ ವಿಲೇವಾರಿ ಸಮರ್ಪಕವಾಗಿ ನಡೆಯುತ್ತಿಲ್ಲ ಎಂದು ಮಾಧ್ಯಮದಲ್ಲಿ ನಿತ್ಯ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು;

(ಆ) ತ್ಯಾಜ್ಯ ವಿಲೇವಾರಿಗೆ ಯಾವುದಾದರೂ ಹೊಸ ಯೋಜನೆಗಳನ್ನು ಸರ್ಕಾರವು ಕೈಗೊಂಡಿದೆಯೇ ; ಹೌದಾದರೆ, ಈ ಕುರಿತು ವಿವರ ನೀಡುವುದು ; ಇಲ್ಲವಾದರೆ, ಕಾರಣಗಳೇನು ?

## ಕರ್ನಾಟಕ ರಾಜ್ಯದ ಉಗ್ರಾಣ ನಿಗಮದ ಬಗ್ಗೆ

**ಶ್ರೀ ಹೆಚ್. ಎಂ. ರೇವಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೦ (೧೯೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ವಿವಿಧ ಭಾಗಗಳಲ್ಲಿ ೨೦೧೫-೧೬ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಉಗ್ರಾಣ ನಿಗಮದಿಂದ ೧೧.೨೫ (ಲಕ್ಷ ಮೆಟ್ರಿಕ್ ಟನ್) ಸಾಮರ್ಥ್ಯದ ಉಗ್ರಾಣಗಳನ್ನು ನಿರ್ಮಾಣ ಮಾಡಲು ಯಾವ ಸಂಸ್ಥೆಗೆ ಯಾವ ದಿನಾಂಕದಂದು ಕಾರ್ಯಾದೇಶ ನೀಡಲಾಯಿತು;

(ಆ) ಕಾರ್ಯಾದೇಶದಂತೆ ೧೧.೨೫ (ಎಲ್.ಎಂ.ಟಿ) ಸಾಮರ್ಥ್ಯದ ಉಗ್ರಾಣವನ್ನು ನಿಗಧಿತ ಸಮಯದಲ್ಲಿ ನಿರ್ಮಿಸಲಾಗಿದೆಯೇ; ನಿರ್ಮಿಸದಿದ್ದಲ್ಲಿ, ಕಾರಣವೇನು ಮತ್ತು ಕಾರ್ಯಾದೇಶದಲ್ಲಿ ನಿಗಧಿತ ಅವಧಿಯಲ್ಲಿ ಪೂರ್ಣಗೊಳಿಸದ ಗುತ್ತಿಗೆದಾರರ ವಿರುದ್ಧ ಕೈಗೊಂಡ ಕ್ರಮವೇನು;

(ಇ) ೧೧.೨೫ (ಎಲ್.ಎಂ.ಟಿ) ಉಗ್ರಾಣ ನಿರ್ಮಾಣದಲ್ಲಿ ಉಂಟಾಗಿರುವ ನಿಯಮಗಳ ಉಲ್ಲಂಘನೆ ಬಗ್ಗೆ ಲೋಕೋಪಯೋಗಿ ಇಲಾಖೆಯ ನಿವೃತ್ತ ಎಸ್.ಇ ಮತ್ತು ಇ.ಇ ಮುಂತಾದ ಅಧಿಕಾರಿಗಳಿಂದ ತನಿಖೆ ನಡೆಸಿ ವರದಿ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ವರದಿ ಬಂದಿದ್ದಲ್ಲಿ, ಸದರಿ ವರದಿ ಅನ್ವಯ ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಮತ್ತು ಗುತ್ತಿಗೆದಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗಿದೆಯೇ; ಕ್ರಮ ಕೈಗೊಳ್ಳದಿದ್ದಲ್ಲಿ, ಕಾರಣವೇನು; ಶಿಸ್ತು ಕ್ರಮ ಕೈಗೊಂಡಿದ್ದಲ್ಲಿ, ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಈ) ಗುತ್ತಿಗೆದಾರರಿಗೆ ಇದುವರೆಗೂ ಪಾವತಿಸಿದ ಒಟ್ಟು ಹಣವೆಷ್ಟು; ಯಾವ ಯಾವ ದಿನಾಂಕದಂದು ಪಾವತಿಸಿದೆ ; ಪಾವತಿಸಿದ ದಿನಾಂಕ, ಚೆಕ್ ನಂಬರ್ ಮುಂತಾದ ವಿವರಗಳು ಪಾವತಿಸಲು ಅನುಸರಿಸಿದ ಕ್ರಮ ಮತ್ತು ನಿರ್ಮಾಣದ ಪ್ರಗತಿಯ ವಿವರ ನೀಡುವುದು;

(ಉ) ಇತ್ತೀಚೆಗೆ ಕೊನೆಯದಾಗಿ ಕಾಮಗಾರಿಯು ಪ್ರಗತಿ ಇಲ್ಲದಿದ್ದರೂ ಗುತ್ತಿಗೆದಾರರಿಗೆ ರೂ. ೧೫.೦೦ ಕೋಟಿ ಪಾವತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಕ್ರಮವು ದಿನಾಂಕ: ೨೮.೦೯.೨೦೧೮ರಂದು ಉಗ್ರಾಣ ಇಲಾಖೆಯ ಆಡಳಿತ ಮಂಡಳಿ ಕೈಗೊಂಡ ನಿರ್ಣಯಕ್ಕೆ/ನಿರ್ಧಾರಕ್ಕೆ ಮತ್ತು ನಿವೃತ್ತ ಎಸ್.ಇ/ಇ.ಇ ಇತರೆ ಅಧಿಕಾರಿಗಳು ನೀಡಿದ ವರದಿಯ ವಿರುದ್ಧವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಊ) ರೂ. ೧೫.೦೦ ಕೋಟಿಗಳನ್ನು ಸರ್ಕಾರದ ಅನುಮತಿ ಇಲ್ಲದೆ/ ಮಂಡಳಿಯ ಅನುಮತಿ ಪಡೆಯದೇ ಗುತ್ತಿಗೆದಾರರಿಂದ ಮುಚ್ಚಳಿಕೆ ಪಡೆಯದೆ ಒಂದೇ ದಿನದಲ್ಲಿ ಪಾವತಿಸಿರುವುದು ವ್ಯವಸ್ಥಾಪಕ ನಿರ್ದೇಶಕರ ಮತ್ತು ಕಾರ್ಯಪಾಲಕ ಅಭಿಯಂತರರ ಅಧಿಕಾರ ದುರುಪಯೋಗವಲ್ಲವೇ? (ವಿವರ ನೀಡುವುದು)

## ಎಂ.ಎಸ್.ಐ.ಎಲ್. ನಿಗಮದಲ್ಲಿ ಖರ್ಚಾದ ಹಣದ ಬಗ್ಗೆ

**ಶ್ರೀ ಹೆಚ್.ಎಂ.ರೇವಣ್ಣ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೧ (೧೯೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಎಂ.ಎಸ್.ಐ.ಎಲ್. ನಿಗಮದಲ್ಲಿ (ಕಾರ್ಪೋರೇಟ್, ಸೋಷಿಯಲ್ ರೆಸ್ಪಾನ್ಸಬಿಲಿಟಿ) ಕಮಿಟಿಯಿಂದ ಖರ್ಚು ಮಾಡಿರುವ ಹಣ ಎಷ್ಟು ಮತ್ತು ಯಾವ ವಸ್ತುಗಳನ್ನು ಖರೀದಿಸುವ ಅಧಿಕಾರ ಯಾರಿಗೆ ನೀಡಲಾಗಿದೆ ; ಇದರ ಸಂಪೂರ್ಣ ವಿವರ ಒದಗಿಸುವುದು ;

(ಆ) ಎಂ.ಎಸ್.ಐ.ಎಲ್. ನಿಗಮದಿಂದ ನಡೆಸುತ್ತಿರುವ ಮದ್ಯಪಾನ ವಿಭಾಗದಿಂದ ಸಾಫ್ಟ್‌ವೇರ್ ಮತ್ತು ಸಿಸ್ಟಮ್‌ಗಳ ಹಾಗೂ ಔಟ್‌ಲೆಟ್ ಮಳಿಗೆಗಳ ಸಿಬ್ಬಂದಿಗಳ ಸಂಬಳ ಎಷ್ಟು, ಇದರ ವಾರ್ಷಿಕ ಆದಾಯ ವೆಚ್ಚಗಳ ವಿವರಗಳನ್ನು ಒದಗಿಸುವುದು ;

(ಇ) ಪೇಪರ್ ವಿಭಾಗದಿಂದ ವಾರ್ಷಿಕ ಎಷ್ಟು ವಹಿವಾಟು ನಡೆಯುತ್ತಿದ್ದು ಇದನ್ನು ಟೆಂಡರ್ ಮೂಲಕ ನೀಡಲಾಗಿದೆಯೇ ಅಥವಾ ಇಲ್ಲವೇ; ಯಾವ ಯಾವ ಕಂಪನಿಗಳಿಗೆ ನೀಡಲಾಗಿದೆ ; (ವಿವರ ಒದಗಿಸುವುದು)

(ಈ) ಎಂ.ಎಸ್.ಐ.ಎಲ್. ನಿಗಮದಿಂದ ನಡೆಸುತ್ತಿರುವ ಪ್ರವಾಸೋದ್ಯಮ ವಿಭಾಗದಿಂದ ವಾರ್ಷಿಕ ಆದಾಯ ಮತ್ತು ಖರ್ಚು ಎಷ್ಟು ?

# ಅನ್ನಭಾಗ್ಯ ಯೋಜನೆಯಲ್ಲಿ ದುರುಪಯೋಗವಾಗುತ್ತಿರುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೩೨ (೧೮೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಡವರ ಹಸಿವು ನೀಗಿಸಲು ಅನ್ನಭಾಗ್ಯ ಯೋಜನೆಯಡಿ ಸರ್ಕಾರ ವಿತರಿಸುತ್ತಿರುವ ಅಪಾರ ಪ್ರಮಾಣದ ಅಕ್ಕಿ ಮಧ್ಯವರ್ತಿಗಳ ಪಾಲಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಈ ಅನ್ನಭಾಗ್ಯ ಯೋಜನೆಯಡಿ ಬಿ.ಪಿ.ಎಲ್–ಎ.ಪಿ.ಎಲ್ ಹಾಗೂ ಅಂತ್ಯೋದಯ ಕಾರ್ಡುದಾರರಿಗೆ ವಿತರಿಸುವ ಅಕ್ಕಿಯಲ್ಲಿ ಸಾವಿರಾರು ಟನ್‌ಗಟ್ಟಲೆ ಉಳಿಕೆಯಾಗುತ್ತಿದ್ದು ಕೆಲ ಅಧಿಕಾರಿ/ನೌಕರರು ಹಾಗೂ ನ್ಯಾಯಬೆಲೆ ಅಂಗಡಿ ಮಾಲೀಕರು ಸರ್ಕಾರಕ್ಕೆ ತಪ್ಪು ಲೆಕ್ಕ ತೋರಿಸಿ ಈ ಅಕ್ಕಿಯನ್ನು ಕಬಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಅಕ್ರಮವನ್ನು ತಪ್ಪಿಸಲು ಹಾಗೂ ಬಡವರಿಗೆ ಈ ಯೋಜನೆಯನ್ನು ಸಂಪೂರ್ಣವಾಗಿ ತಲುಪುವಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ಸುಳ್ಳು ಲೆಕ್ಕ ತೋರಿಸಿ ಕಾಳಸಂತೆಯಲ್ಲಿ ಅನ್ನಭಾಗ್ಯ ಅಕ್ಕಿಯನ್ನು ಮಾರಾಟ ಮಾಡುವ ಅಧಿಕಾರಿ/ಅಂಗಡಿ ಮಾಲೀಕರು ಹಾಗೂ ಮಧ್ಯವರ್ತಿಗಳ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು? (ಸ್ಪಷ್ಟ ಮಾಹಿತಿ ಒದಗಿಸುವುದು)

## ನಗರಸಭೆ/ಸ್ಥಳೀಯ ಸಂಸ್ಥೆಗಳಲ್ಲಿನ ಸಿಬ್ಬಂದಿಗಳನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೩ (೧೮೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೭–೧೮ ರಿಂದ ೨೦೧೯–೨೦ನೇ ಸಾಲಿನವರೆಗೆ ಪೌರಾಡಳಿತ ಇಲಾಖೆಯ ನಗರಸಭೆ/ಸ್ಥಳೀಯ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರ ಕಾರ್ಮಿಕರು/ನೈರ್ಮಲ್ಯ ನಿರೀಕ್ಷಕರು (ಸೂಪರ್‌ವೈಸರ್) ವಾಹನ ಚಾಲಕರು/ಗ್ರೂಪ್ 'ಡಿ' ನೌಕರರನ್ನು ಯಾವ ಯಾವ ನಗರ ಸಭೆಗಳಲ್ಲಿ ಎಷ್ಟು ಸಿಬ್ಬಂದಿಗಳನ್ನು ಖಾಯಂಗೊಳಿಸಲಾಗಿದೆ ; ಖಾಯಂಗೊಳಿಸಿದಲ್ಲಿ, ನಗರಸಭೆ/ಸ್ಥಳೀಯ ಸಂಸ್ಥೆಗಳವಾರು, ವರ್ಷವಾರು, ಜಿಲ್ಲಾವಾರು ನೌಕರರ ಹೆಸರುಗಳೊಂದಿಗೆ ಸ್ಪಷ್ಟ ಮಾಹಿತಿ ಒದಗಿಸುವುದು ;

(ಆ) ಹಾಗಿದ್ದಲ್ಲಿ, ಈ ನಗರಸಭೆ/ಸ್ಥಳೀಯ ಸಂಸ್ಥೆಗಳಲ್ಲಿ ಉಳಿದ ಪೌರಕಾರ್ಮಿಕರು, ನೈರ್ಮಲ್ಯ ನಿರೀಕ್ಷಕರೆಷ್ಟು ಹಾಗೂ 'ಡಿ' ಗ್ರೂಪ್/ ವಾಹನ ಚಾಲಕರನ್ನು ಯಾವ ಕಾಲಮಿತಿಯೊಳಗೆ ಖಾಯಂಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಮಹಾನಗರ ಪಾಲಿಕೆಗಳಿಗೆ ಬಿಡುಗಡೆಯಾದ ಅನುದಾನ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೪ (೧೮೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಎಲ್ಲಾ ಮಹಾನಗರ ಪಾಲಿಕೆಗಳಿಗೆ ಸರ್ಕಾರದಿಂದ ಬಿಡುಗಡೆ ಮಾಡಿದ ಅನುದಾನವೆಷ್ಟು ; ಖರ್ಚಾದ ಹಣವೆಷ್ಟು ; (ವಿವರ ನೀಡುವುದು)

(ಆ) ಬಿಡುಗಡೆಯಾದ ಅನುದಾನ ಸಮರ್ಪಕವಾಗಿ ಬಳಕೆಯಾಗದಿರುವುದು ಹಾಗೂ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಎಲ್ಲಾ ಮಹಾನಗರ ಪಾಲಿಕೆಗಳು ಘನತ್ಯಾಜ್ಯ ವಿಲೇವಾರಿಗಾಗಿ ಸಾಲಿಡ್ ವೇಸ್ಟ್ ಮ್ಯಾನೇಜ್‌ಮೆಂಟ್‌ಗೆ ಹಂಚಿಕೆ ಮಾಡಲಾದ ಅನುದಾನವೆಷ್ಟು ; (ವರ್ಷವಾರು ವಿವರ ನೀಡುವುದು)

(ಈ) ಸಾಲಿಡ್ ವೇಸ್ಟ್ ಮ್ಯಾನೇಜ್‌ಮೆಂಟ್ ನಿಗದಿತ ಸಮಯದಲ್ಲಿ ಕಾರ್ಯನಿರ್ವಹಿಸುತ್ತಿದೆಯೇ ? (ವಿವರ ನೀಡುವುದು)

## ತೊಗರಿ ಖರೀದಿ ಕೇಂದ್ರಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೫ (೧೮೫) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ತೊಗರಿ ಖರೀದಿ ಕೇಂದ್ರಗಳೆಷ್ಟು ; ಯಾವ ಯಾವ ಸಂಸ್ಥೆಗಳಿಗೆ/ಸೊಸೈಟಿಗಳಿಗೆ ವಹಿಸಲಾಗಿದೆ ; (ತಾಲ್ಲೂಕುವಾರು ಕೇಂದ್ರಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೀದರ್ ಜಿಲ್ಲೆಯ ಖರೀದಿ ಕೇಂದ್ರಗಳಲ್ಲಿ ರೈತರಿಂದ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಇ) ಸರ್ಕಾರವು ಈ ವರ್ಷ ಪ್ರತಿ ಕ್ವಿಂಟಲ್ ತೊಗರಿ ಮತ್ತು ಇತರ ದ್ವಿಧಾನ್ಯಗಳಿಗೆ ಎಷ್ಟು ದರ ನಿಗಧಿ ಮಾಡಲಾಗಿದೆ ; (ಸ್ಪಷ್ಟ ಮಾಹಿತಿ ನೀಡುವುದು)

(ಈ) ಸುಮಾರು ಸೊಸೈಟಿಗಳು ಖರೀದಿ ಕೇಂದ್ರಗಳಲ್ಲಿ ಕ್ವಿಂಟಲ್‌ಗೆ ೨/೩ ಕೆ.ಜಿ. ಧಾನ್ಯವನ್ನು ಮತ್ತು ರೈತರಿಂದ ಅಧಿಕಾರಿಗಳು/ ಸಿಬ್ಬಂದಿಗಳು ಹಣ ಪಡೆಯುತ್ತಿರುವುದು ನಿಜವೇ ?

## ರಾಜ್ಯದ ಘನ ತ್ಯಾಜ್ಯ ನಿರ್ವಹಣೆ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೬ (೧೬೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ವೈಜ್ಞಾನಿಕವಾಗಿ ಘನ ತ್ಯಾಜ್ಯ ನಿರ್ವಹಣೆಯನ್ನು ಮಾಡಲಾಗುತ್ತಿದೆಯೇ ;

(ಆ) ಇನ್ನು ಹಲವಾರು ನಗರ ಸ್ಥಳಿಯ ಸಂಸ್ಥೆಗಳಲ್ಲಿ ಘನ ತ್ಯಾಜ್ಯ ನಿರ್ವಹಣೆ ಮಾಡದೆ ಎಲ್ಲೆಂದರಲ್ಲಿ ಸುರಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಘನ ತ್ಯಾಜ್ಯ ನಿರ್ವಹಣೆಗೆ ಸ್ಥಳಿಯ ಸಂಸ್ಥೆಗಳಿಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಖರ್ಚಾದ ಅನುದಾನವೆಷ್ಟು? (ಸಂಪೂರ್ಣ ವಿವರ ನೀಡುವುದು)

## ರಾಜ್ಯದ ಕೈಗಾರಿಕೆಗಳ ವಸಾಹತುಗಳು ಮತ್ತು ಅಭಿವೃದ್ಧಿ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೭ (೧೭೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಕೈಗಾರಿಕಾ ವಸಾಹತುಗಳ ಸದ್ಯದ ಸ್ಥಿತಿಗತಿಗಳೇನು ; ಕೈಗಾರಿಕಾ ಪ್ರದೇಶದ ಸಮಗ್ರ ಅಭಿವೃದ್ಧಿಗೆ ಸರ್ಕಾರದ ಬಳಿ

ಯಾವ ಯೋಜನೆಯಿದೆ ; ಹೊಸ ಕೈಗಾರಿಕಾ ಪ್ರದೇಶ ಸ್ಥಾಪನೆಯ ಯೋಜನೆ ಇದೆಯೇ ; (ಮಾಹಿತಿ ನೀಡುವುದು)

(ಆ) ಪೀಣ್ಯ ಕೈಗಾರಿಕಾ ಪ್ರದೇಶ ವಸಂತ ನರಸಾಪುರ ಕೈಗಾರಿಕಾ ಪ್ರದೇಶ ಹಾಗೂ ಶಿವಮೊಗ್ಗ ಸೇರಿದಂತೆ ರಾಜ್ಯದ ಹಲವು ಕೈಗಾರಿಕಾ ಪ್ರದೇಶಗಳು ಜಿ.ಎಸ್.ಟಿ ಅನುಷ್ಠಾನದ ನಂತರ ಸಾಕಷ್ಟು ಸಂಕಷ್ಟ ಅನುಭವಿಸಿದ್ದು ಸರ್ಕಾರದ ಗಮನದಲ್ಲಿದೆಯೇ ; ಈ ಕೈಗಾರಿಕಾ ಪ್ರದೇಶಗಳ ಸದ್ಯದ ಸ್ಥಿತಿಯೇನು ; ಇವುಗಳ ಪುನರ್ ಅಭಿವೃದ್ಧಿಯ ಮಾನದಂಡಗಳೇನು ;

(ಇ) ಉತ್ತರ ಕರ್ನಾಟಕ ಅಥವಾ ಕಲ್ಯಾಣ ಕರ್ನಾಟಕ ಪ್ರದೇಶಗಳಲ್ಲಿ ನವ ಕೈಗಾರಿಕಾ ವಸಾಹತುಗಳ ಸ್ಥಾಪನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಹಾಗಿದ್ದಲ್ಲಿ, ಪ್ರಸ್ತಾವನೆಯ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

## ರಾಜ್ಯದಲ್ಲಿ ಕಳೆದ ಒಂದು ವರ್ಷದಲ್ಲಿ ಬಿ.ಪಿ.ಎಲ್. ಕಾರ್ಡ್ ವಿತರಣೆ ಬಗ್ಗೆ

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೮ (೧೭೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಒಂದು ವರ್ಷದಿಂದ ವಿತರಿಸಿರುವ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಫಲಾನುಭವಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಇದಕ್ಕಾಗಿ ಎಷ್ಟು ಬಯೋಮೆಟ್ರಿಕ್ ಯಂತ್ರಗಳನ್ನು ಖರೀದಿಸಲಾಗಿದೆ ಹಾಗೂ ಇವುಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ;

(ಇ) ಎ.ಪಿ.ಎಲ್ ಕಾರ್ಡ್‌ದಾರರಿಗೆ ಸರ್ಕಾರವು ನೀಡುತ್ತಿರುವ ಸೌಲಭ್ಯಗಳು ಸರಿಯಾಗಿ ತಲುಪುತ್ತಿವೆಯೇ ;

(ಈ) ಇದಕ್ಕಾಗಿ ಸರ್ಕಾರವು ವಾರ್ಷಿಕ ಎಷ್ಟು ಅನುದಾನ ಬಳಕೆ ಮಾಡುತ್ತಿದೆ ?

## ನಗರಸಭೆಗಳಿಗೆ ಕಳೆದ ೨ ವರ್ಷಗಳಲ್ಲಿ ನೀಡಿರುವ ಅನುದಾನದ ಕುರಿತು

**ಶ್ರೀ ಹೆಚ್.ಎಂ. ರಮೇಶ್ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು):–**

೧೩೯ (೧೭೩) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ನಗರಸಭೆಗಳಿಗೆ ನೀಡಿರುವ ಅನುದಾನದ ಮೊತ್ತ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ನೀಡಿರುವ ಅನುದಾನದಲ್ಲಿ ಎಷ್ಟು ಅನುದಾನ ಬಳಕೆಯಾಗಿದೆ ; ಸಮರ್ಪಕವಾಗಿ ಬಳಕೆಯಾಗದಿದ್ದಲ್ಲಿ ಅದಕ್ಕೆ ಸೂಕ್ತ ಕಾರಣ ನೀಡುವುದು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಸ್ಮಾರ್ಟ್‌ಕಾರ್ಡ್ ಹೆಸರಿನಲ್ಲಿ ರಾಜ್ಯದ ಪಡಿತರದಾರರಿಗೆ ವಂಚನೆ ಮಾಡುತ್ತಿರುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೪೦ (೭೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಪಡಿತರ ಚೀಟಿದಾರರಿದ್ದಾರೆ ; (ವಿವರ ನೀಡುವುದು)

(ಆ) APL, BPL ಮತ್ತು ಅಂತ್ಯೋದಯ ಕಾರ್ಡ್‌ದಾರರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಪಡಿತರ ಪಡೆಯಲು ಸ್ಮಾರ್ಟ್‌ಕಾರ್ಡ್ ಕಡ್ಡಾಯ ಎಂದು ನಂಬಿಸಿ ಕಾರ್ಡ್‌ದಾರರಿಂದ ಹಣ ವಸೂಲಿ ಮಾಡುತ್ತಿರುವ ವಂಚಕ ಜಾಲದ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ ;

(ಈ) ಈ ವಂಚನೆಯುನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಅದಿರಿನ ಸೆಸ್ ಮೊತ್ತದ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೧೪೧ (೭೫) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಐದು ವರ್ಷಗಳಿಂದ (೨೦೧೫–೨೦೨೦) ವಸೂಲಿಯಾಗಿರುವ ಅದಿರಿನ ಮೇಲಿನ ಸೆಸ್ ಮೊತ್ತವೆಷ್ಟು;

(ಆ) ವಸೂಲಾಗಿರುವ ಸೆಸ್‌ನ ಜಿಲ್ಲಾವಾರು, ವರ್ಷಾವಾರು ವಿವರ ನೀಡುವುದು ;

(ಇ) ಈ ಸೆಸ್‌ನ್ನು ಯಾವ ಉದ್ದೇಶಕ್ಕೆ ಬಳಕೆ ಮಾಡಲಾಗುತ್ತಿದೆ ; (ವಿವರ ನೀಡುವುದು)

(ಈ) ಈ ಸೆಸ್‌ನಲ್ಲಿ ಖರ್ಚಾದ ಹಾಗೂ ಖರ್ಚಾಗದೆ ಉಳಿದ ಮೊತ್ತ ಎಷ್ಟು ; (ವಿವರ ನೀಡುವುದು)

(ಉ) ಈ ಹಣ ಖರ್ಚಾಗದೆ ಎಷ್ಟು ದಿನಗಳಿಂದ ಉಳಿದಿದೆ ; ಯಾವಾಗ ಖರ್ಚು ಮಾಡಲಾಗುವುದು ? (ವಿವರ ನೀಡುವುದು)

# ಗೃಹ ಲಕ್ಷ್ಮಿ ಬೆಳೆ ಸಾಲ ಯೋಜನೆಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಹಾಗೂ ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೪೨ (೧೪೪+೭೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೯-೨೦೨೦ನೇ ಸಾಲಿನಲ್ಲಿ ಸಣ್ಣ ಮತ್ತು ಅತೀ ಸಣ್ಣ ರೈತರ ಆಭರಣಗಳ ಮೇಲೆ ಶೇಕಡಾ ೩ರ ಬಡ್ಡಿ ದರದಲ್ಲಿ ಬೆಳೆ ಸಾಲ ವಿತರಿಸಲು "ಗೃಹಲಕ್ಷ್ಮಿ ಬೆಳೆ" ಸಾಲ ಯೋಜನೆ ಜಾರಿಗೊಳಿಸಿರುವುದು ನಿಜವೇ ; ಜಾರಿಗೊಳಿಸಿದ್ದಲ್ಲಿ, ಸರ್ಕಾರಿ ಆದೇಶ ಸಂಖ್ಯೆ : ಸಿಒ ೫೮ ಸಿ.ಎಲ್.ಎಸ್. ೨೦೧೯, ದಿನಾಂಕ : ೨೧-೦೨-೨೦೧೯ರ ಆದೇಶದ ಪ್ರತಿ ಹಾಗೂ ಸಂಪೂರ್ಣ ಮಾಹಿತಿಯನ್ನು ಒದಗಿಸುವುದು;

(ಆ) "ಗೃಹ ಲಕ್ಷ್ಮಿ ಬೆಳೆ" ಸಾಲ ಯೋಜನೆಯಡಿ ಇದುವರೆಗೂ ಎಷ್ಟು ಫಲಾನುಭವಿಗಳಿಗೆ ಸಾಲ ನೀಡಲಾಗಿರುತ್ತದೆ ; ಪ್ರತಿ ಜಿಲ್ಲಾ ಸಹಕಾರಿ ಬ್ಯಾಂಕುವಾರು ಸಂಪೂರ್ಣ ಸಾಲ ವಿತರಣಾ ಮಾಹಿತಿಯನ್ನು ನೀಡುವುದು :

(ಇ) ಈ "ಗೃಹ ಲಕ್ಷ್ಮಿ ಬೆಳೆ" ಸಾಲ ಯೋಜನೆಯನ್ನು ಜಾರಿಗೊಳಿಸದಿರುವ ಬ್ಯಾಂಕುಗಳು ಯಾವುವು ಮತ್ತು ಈ ಬ್ಯಾಂಕುಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

# ಕೆ.ಎ.ಐ.ಡಿ.ಬಿ. ವತಿಯಿಂದ ರಾಜ್ಯದಲ್ಲಿ ಕೈಗಾರಿಕಾ ಅಭಿವೃದ್ಧಿಗಾಗಿ ವಶಪಡಿಸಿಕೊಳ್ಳಲಾದ ಜಮೀನಿನ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೧೪೩ (೭೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೧೦ ವರ್ಷಗಳಲ್ಲಿ ಕೆ.ಎ.ಐ.ಡಿ.ಬಿ. ವತಿಯಿಂದ ರಾಜ್ಯದಲ್ಲಿ ಕೈಗಾರಿಕಾ ಅಭಿವೃದ್ಧಿಗಾಗಿ ವಶಪಡಿಸಿಕೊಳ್ಳಲಾದ ಜಮೀನಿನ ವಿಸ್ತೀರ್ಣವೆಷ್ಟು ;

(ಆ) ಸಣ್ಣ ಕೈಗಾರಿಕೆಗಳನ್ನು ಉತ್ತೇಜಿಸಲು ಕೈಗಾರಿಕೋದ್ಯಮಿಗಳಿಗೆ ನೀಡಲಾಗಿರುವ ರಿಯಾಯಿತಿಗಳಾವುವು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಈಗಾಗಲೇ ವಿತರಿಸಲಾಗಿರುವ ಕೈಗಾರಿಕಾ ಶೆಡ್ಡುಗಳ ಸಂಖ್ಯೆ ಎಷ್ಟು ; ಈ ಶೆಡ್ಡುಗಳನ್ನು ಯಾವ ಮಾನದಂಡದ ಮೇಲೆ ವಿತರಿಸಲಾಗಿರುತ್ತದೆ ;

(ಈ) ಉದ್ಯಮಗಳನ್ನು ನಡೆಸಲು ನೀಡಲಾಗಿರುವ ಜಮೀನುಗಳಲ್ಲಿ ಈವರೆವಿಗೂ ಉದ್ಯಮಗಳನ್ನು ಸ್ಥಾಪಿಸದಿರುವ ಉದ್ಯಮಿಗಳ ಸಂಖ್ಯೆ ಎಷ್ಟು ; ಇವರುಗಳ ಮೇಲೆ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಉ) ರಾಜ್ಯದಲ್ಲಿ ಉದ್ಯಮಗಳನ್ನು ಸ್ಥಾಪಿಸದೆ ಅನ್ಯ ಉದ್ದೇಶಕ್ಕಾಗಿ ಜಮೀನನ್ನು ಬಳಸಿಕೊಂಡಿರುವ ಪ್ರಕರಣಗಳೆಷ್ಟು ; ಹಾಗಿದ್ದಲ್ಲಿ, ಅಂತಹವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಕೊಡಗು ಜಿಲ್ಲೆಯ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಕಟ್ಟಡ ನಿರ್ಮಾಣಕ್ಕೆ ಅನುದಾನ ಒದಗಿಸುವ ಕುರಿತು

**ಶ್ರೀಮತಿ ವೀಣಾ ಅಚ್ಚಯ್ಯ ಎಸ್. (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೪೪ (೯೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿನ ಹಲವಾರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು ಹೊಸದಾಗಿ ಕಟ್ಟಡ ನಿರ್ಮಾಣ ಮಾಡಿಕೊಳ್ಳಲು ಸ್ವಂತ ಆರ್ಥಿಕ ಬಲವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಸಕ್ತ ಆರ್ಥಿಕ ವರ್ಷದಲ್ಲಿ ಜಿಲ್ಲೆಯಲ್ಲಿನ ಎಷ್ಟು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳಿಗೆ ಹೊಸ ಕಟ್ಟಡ ನಿರ್ಮಾಣಕ್ಕೆ ಆರ್ಥಿಕ ಸೌಲಭ್ಯ ಒದಗಿಸಲಾಗಿದೆ ? (ವಿವರ ನೀಡುವುದು)

## ಕಾಳು ಮೆಣಸಿಗೆ ಆರ್.ಎಂ.ಸಿ. ವತಿಯಿಂದ ವಿಧಿಸುತ್ತಿರುವ ಸೆಸ್ ಅನ್ನು ತೆಗೆದು ಹಾಕುವ ಕುರಿತು

**ಶ್ರೀಮತಿ ವೀಣಾ ಅಚ್ಚಯ್ಯ ಎಸ್. (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೪೫ (೧೯೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾಳು ಮೆಣಸಿಗೆ ಆರ್.ಎಂ.ಸಿ. ವತಿಯಿಂದ ೧.೫% ಸೆಸ್ ವಿಧಿಸುತ್ತಿರುವುದರಿಂದ, ಬೆಳೆ ಹಾನಿ ಹಾಗೂ ಬೆಳೆ ಕುಸಿತದಿಂದ ಈಗಾಗಲೇ ಕಂಗೆಟ್ಟಿರುವ ರೈತರು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸೆಸ್ ವಿಧಿಸುತ್ತಿರುವುದನ್ನು ಕೈಬಿಡಲಾಗುವುದೇ ;

(ಇ) ಯಾವ ಕಾಲಮಿತಿಯೊಳಗೆ ಈ ಕುರಿತು ಕ್ರಮ ಕೈಗೊಂಡು, ತೀವ್ರ ಸಂಕಷ್ಟದಲ್ಲಿರುವ ರೈತರ ನೆರವಿಗೆ ಧಾವಿಸಲಾಗುವುದು ?

## ಬೀದರ್ ಜಿಲ್ಲೆಯ ಪಟ್ಟಣ ಪಂಚಾಯಿತಿಗಳ ಬಗ್ಗೆ

**ಶ್ರೀ ವಿಜಯ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೬ (೬೨) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಪಟ್ಟಣ ಪಂಚಾಯಿತಿಗಳ ಸಂಖ್ಯೆ ಎಷ್ಟು ;

(ಆ) ಈ ಪಟ್ಟಣ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲು ಬಂದ ಪ್ರಸ್ತಾವನೆಗಳು ಎಷ್ಟು ;

(ಇ) ಪ್ರಸ್ತುತ ಎಷ್ಟು ಪಟ್ಟಣ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲಾಗಿದೆ ? (ತಾಲ್ಲೂಕುವಾರು ವಿವರ ಒದಗಿಸುವುದು)

## ನಕಲಿ ಬಿ.ಪಿ.ಎಲ್ ಕಾರ್ಡ್‌ಗಳಿಂದಾಗಿ ಸರ್ಕಾರಕ್ಕೆ ಮತ್ತು ಆರ್ಥಿಕ ದುರ್ಬಲರಿಗೆ ಆಗುವ ವಂಚನೆ ತಡೆ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೭ (೬೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಬಿ.ಪಿ.ಎಲ್. ಕಾರ್ಡ್‌ದಾರರ ಸಂಖ್ಯೆ ಎಷ್ಟು ; ಜಿಲ್ಲಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು ;

(ಆ) ನಕಲಿ ಬಿ.ಪಿ.ಎಲ್. ಕಾರ್ಡ್‌ದಾರರಿಂದ ರಾಜ್ಯದ ಬೊಕ್ಕಸಕ್ಕೆ ಆಗುತ್ತಿರುವ ಆರ್ಥಿಕ ನಷ್ಟದ ಅಂದಾಜು ಸರ್ಕಾರಕ್ಕಿದೆಯೇ ; ಹಾಗಿದ್ದಲ್ಲಿ, ನಕಲಿ ಕಾರ್ಡ್‌ದಾರರ ಸಂಖ್ಯೆ ಮತ್ತು ಇವರುಗಳಿಂದ ಆಗುತ್ತಿರುವ ಆರ್ಥಿಕ ನಷ್ಟದ ಸ್ಪಷ್ಟ ಮಾಹಿತಿ ನೀಡುವುದು ;

(ಇ) ನಕಲಿ ಬಿ.ಪಿ.ಎಲ್. ಕಾರ್ಡ್‌ದಾರರನ್ನು ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳು ಏನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಅಂತರ್ಜಲ ಮಟ್ಟ ಪಾತಾಳಕ್ಕೆ ಕುಸಿದಿರುವ ಸಮಸ್ಯೆ ಬಗ್ಗೆ

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೪೮ (೭೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಂತರ್ಜಲ ಮಟ್ಟ ಪಾತಾಳಕ್ಕೆ ಕುಸಿದಿರುವುದು ಹಾಗೂ ವರ್ಷದಿಂದ ವರ್ಷಕ್ಕೆ ವಿರಳವಾಗುತ್ತಿರುವ ಮಳೆಗಾಲ ಅಂತರ್ಜಲಕ್ಕೆ ಹೊಡತ ನೀಡುತ್ತಿರುವುದು ಹಾಗೂ ನಗರಗಳಲ್ಲಿನ ಡಾಂಬರೀಕರಣದಿಂದಾಗಿ ನೀರು ಇಂಗಲು ಜಾಗವೇ ಇಲ್ಲದೆ ಮಳೆ ನೀರು ಚರಂಡಿಗೆ ಸೇರಿ ವ್ಯರ್ಥವಾಗುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಕೈಗೊಂಡ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು ;

(ಆ) ಭೂಮಿಯಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಅಂತರ್ಜಲ ಪ್ರಮಾಣವನ್ನು ಪರಿಣಾಮಕಾರಿಯಾಗಿ ಹೆಚ್ಚಿಸಲು ಸರ್ಕಾರ ಯಾವ ಮಾರ್ಗೋಪಾಯಗಳನ್ನು ಅನುಸರಿಸುತ್ತಿದೆ ; ಹಾಗೂ ಈ ನಿಟ್ಟಿನಲ್ಲಿ ಒದಗಿಸಲಾದ ಹಾಗೂ ವಿನಿಯೋಗಿಸಲಾದ ಅನುದಾನ ಎಷ್ಟು; (ವಿವರಗಳನ್ನು ನೀಡುವುದು)

(ಇ) ಇತರೆ ದೇಶ ರಾಜ್ಯಗಳಲ್ಲಿ ಅಂತರ್ಜಲ ಪ್ರಮಾಣವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೈಗೊಂಡಿರಬಹುದಾದ ವಿಶೇಷ ಯೋಜನೆಗಳನ್ನು ಸರ್ಕಾರವು ಅನುಸರಿಸುವುದೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡಿರುವ ಕ್ರಮಗಳ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು ?

## ಪುರಸಭೆ, ನಗರಸಭೆ ಅಭಿವೃದ್ಧಿ ಕಾರ್ಯಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ನೀಡಿರುವ ಅನುದಾನದ ಬಗ್ಗೆ

**ಶ್ರೀ ಎಸ್.ಎಲ್. ಘೋಟ್ನೇಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೯ (೬೯) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರವಾರ ಜಿಲ್ಲೆಯಲ್ಲಿ ಯಾವ ಯಾವ ನಿರ್ಧಿಷ್ಟ ಅಭಿವೃದ್ಧಿ ಕಾರ್ಯವನ್ನು ಪುರಸಭೆ, ನಗರ ಸಭೆ, ಪಟ್ಟಣ ಪಂಚಾಯಿತಿಗಳು ಕೈಗೊಳ್ಳುತ್ತಿವೆ ;

(ಆ) ಈ ಅಭಿವೃದ್ಧಿಗೆ ಕೇಂದ್ರ ಹಾಗೂ ರಾಜ್ಯಗಳು ನೀಡುತ್ತಿರುವ ಅನುದಾನದ ಪ್ರಮಾಣ ಎಷ್ಟು ; ಈವರೆಗೆ ಬಂದಿರುವ, ಬಾರದಿರುವ, ಬಂದೂ ಬಳಕೆಯಾಗದ ಅನುದಾನದ ಮೊತ್ತ ಎಷ್ಟು ; (ವಿವರ ನೀಡುವುದು)

(ಇ) ಮೇಲ್ಕಂಡ ಸಂಸ್ಥೆಗಳು ಅಭಿವೃದ್ಧಿ ಕಾರ್ಯದಲ್ಲಿ ಸ್ವಾವಲಂಬನೆ ಸಾಧಿಸಲು ಯಾವ ಯಾವ ಮೂಲಗಳಿಂದ ಅಗತ್ಯ ಸಂಪನ್ಮೂಲ ಒದಗಿಸಲು ಕ್ರಮ ಕೈಗೊಳ್ಳಲಾಗಿದೆ ? (ಜಿಲ್ಲಾವಾರು/ತಾಲ್ಲೂಕುವಾರು ವಿವರ ನೀಡುವುದು)

# ನ್ಯಾಯಬೆಲೆ ಅಂಗಡಿಯಲ್ಲಿ ಆಹಾರ ಪದಾರ್ಥ ಸರಬರಾಜು ಮಾಡುವಲ್ಲಿ ಅವ್ಯವಹಾರದ ಬಗ್ಗೆ

**ಶ್ರೀ ಎಸ್.ಎಲ್.ಘೋಟ್ನೆಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೦ (೭೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯ ಅನ್ನಭಾಗ್ಯ ಯೋಜನೆಯಡಿಯಲ್ಲಿ ಪ್ರತಿ ತಿಂಗಳೂ ಸರಬರಾಜು ಮಾಡಲಾಗುತ್ತಿರುವ ಆಹಾರ ಪದಾರ್ಥಗಳ ಪ್ರಮಾಣವೆಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಾರವಾರ ಜಿಲ್ಲೆಗೆ ಪ್ರತಿ ತಿಂಗಳು ಆಹಾರ ಪದಾರ್ಥ ಸರಬರಾಜು ಮಾಡಲು ಸರ್ಕಾರಕ್ಕೆ ತಗಲುತ್ತಿರುವ ವೆಚ್ಚವೆಷ್ಟು ; (ಜಿಲ್ಲಾವಾರು/ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಇಲಾಖೆಯ ಅಧಿಕಾರಿ ನ್ಯಾಯಬೆಲೆ ಅಂಗಡಿಗಳಿಗೆ ಆಹಾರ ಪದಾರ್ಥ ಸರಬರಾಜು ಮಾಡುವಲ್ಲಿ ತಾರತಮ್ಯ ಹಾಗೂ ಭ್ರಷ್ಟಾಚಾರದಲ್ಲಿ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ನ್ಯಾಯಬೆಲೆ ಅಂಗಡಿಯವರು ಆಹಾರ ಸಾಮಗ್ರಿಗಳನ್ನು ಬಿ.ಪಿ.ಎಲ್ ಕಾರ್ಡ್‌ದಾರರಿಗೆ ನೀಡುವಾಗ ಬಹಳಷ್ಟು ಅವ್ಯವಹಾರಗಳು ಆಗಿದ್ದು ಇದರ ಕುರಿತು ಸಂಬಂಧಿಸಿದವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಯಾವ ಯಾವ ಅಧಿಕಾರಿಗಳ ವಿರುದ್ಧ ಭ್ರಷ್ಟಾಚಾರ ದೂರುಗಳು ದಾಖಲಾಗಿರುತ್ತದೆ ಹಾಗೂ ಇಂತಹ ಅಧಿಕಾರಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು; ಯಾವ ಯಾವ ನ್ಯಾಯಬೆಲೆ ಅಂಗಡಿಯುವರ ಮೇಲೆ ಕ್ರಮಕೈಗೊಳ್ಳಲಾಗಿದೆ ? (ಜಿಲ್ಲಾವಾರು/ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

## ಅನ್ನಭಾಗ್ಯ ಯೋಜನೆಯನ್ನು ನ್ಯಾಯಬೆಲೆ ಅಂಗಡಿಯವರು ದುರುಪಯೋಗಪಡಿಸುತ್ತಿರುವ ಬಗ್ಗೆ

**ಶ್ರೀ ಎಸ್.ಎಲ್.ಘೋಟ್ನೆಕರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೧ (೭೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ೧ ವರ್ಷದಲ್ಲಿ ಅನ್ನಭಾಗ್ಯ ಯೋಜನೆಯಡಿಯಲ್ಲಿ ಬಿ.ಪಿ.ಎಲ್., ಎ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್‌ದಾರರಿಗೆ ವಿತರಿಸಿದ ಅಕ್ಕಿಯ ಪ್ರಮಾಣ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಎಷ್ಟು ಎ.ಪಿ.ಎಲ್., ಬಿ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್‌ಗಳಿವೆ; ಎ.ಪಿ.ಎಲ್, ಬಿ.ಪಿ.ಎಲ್ ಮತ್ತು ಅಂತ್ಯೋದಯ ಕಾರ್ಡ್ ಹೊಂದಿದವರಿಗೆ ವಿತರಿಸಲಾಗುವ ತಲಾ ಅಕ್ಕಿಯ ಪ್ರಮಾಣವೆಷ್ಟು ; ಜಿಲ್ಲೆಯಲ್ಲಿ ಒಟ್ಟು ಕುಟುಂಬಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಪ್ರತಿ ತಿಂಗಳು ವಿತರಿಸದಿರುವ ಅಕ್ಕಿಯನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗುತ್ತದೆ ; ಬಡವರಿಗೆ ಸರ್ಕಾರವು ನೀಡುವ ಅಕ್ಕಿಯನ್ನು ನ್ಯಾಯಬೆಲೆ ಅಂಗಡಿಯ ಮಾಲೀಕರು ವಿತರಿಸದೇ ಬಡವರಿಗೆ ವಿತರಿಸಿದೆಯೆಂದು ಸರ್ಕಾರಕ್ಕೆ ಸುಳ್ಳು ಲೆಕ್ಕ ತೋರಿಸುವ ಮೂಲಕ ವಂಚಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ರೀತಿ ವಂಚಿಸುತ್ತಿರುವ ನ್ಯಾಯಬೆಲೆ ಅಂಗಡಿಯ ಮಾಲೀಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಕಳೆದ ೧ ವರ್ಷದಲ್ಲಿ ಈ ರೀತಿ ಎಷ್ಟು ಪ್ರಕರಣಗಳು ದಾಖಲಾಗಿವೆ ;

(ಈ) ಬಡವರಿಗೆ ಕಡಿಮೆ ದರದಲ್ಲಿ ಅಥವಾ ಉಚಿತವಾಗಿ ಅಕ್ಕಿಯನ್ನು ವಿತರಿಸಲು ಸರ್ಕಾರವು ಕಳೆದ ೧ ವರ್ಷದಲ್ಲಿ ಎಷ್ಟು ವೆಚ್ಚ ಮಾಡಿದೆ ; ತಿಂಗಳುವಾರು ವಿವರ ನೀಡುವುದು ? (ಜಿಲ್ಲಾವಾರು/ ತಾಲ್ಲೂಕುವಾರು ವಿವರ ನೀಡುವುದು)

## ರಾಜ್ಯದಲ್ಲಿರುವ ಸಹಕಾರ ಸಂಘಗಳ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೫೨ (೧೩೪) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳೆಷ್ಟು; ಅವು ಯಾವುವು ; (ಗ್ರಾಮವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೦೩ ವರ್ಷಗಳಿಂದ ಸಂಘಗಳ ಕಟ್ಟಡವನ್ನು ಕಟ್ಟಲು ಸರ್ಕಾರವು ಅನುದಾನ ಬಿಡುಗಡೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಯಾವ ಸಂಘಕ್ಕೆ ಎಷ್ಟು ಅನುದಾನವನ್ನು ಬಿಡುಗಡೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಪ್ರಸ್ತುತ ಸಂಘದಲ್ಲಿರುವ ಸದಸ್ಯರ ಸಂಖ್ಯೆ ಎಷ್ಟು ; ಹಾಗೂ ಮಹಿಳಾ ಸದಸ್ಯರ ಸಂಖ್ಯೆ ಎಷ್ಟು ; ಎಷ್ಟು ಜನ ಸದಸ್ಯರಿಗೆ/ ಮಹಿಳಾ ಸದಸ್ಯರಿಗೆ ಸಾಲವನ್ನು ಮಂಜೂರು ಮಾಡಲಾಗಿದೆ?

## ರಾಜ್ಯದಲ್ಲಿರುವ ಬಿ.ಪಿ.ಎಲ್. ಕಾರ್ಡ್‌ಗಳ ಹಂಚಿಕೆ ಬಗ್ಗೆ

**ಡಾ: ಜಯಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :–**

೧೫೩ (೧೩೫) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಎಷ್ಟು ಜನರಿಗೆ ಬಿ.ಪಿ.ಎಲ್. ಕಾರ್ಡ್‌ಗಳನ್ನು ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ರೀತಿ ಏಕಾಏಕಿ ಬಿ.ಪಿ.ಎಲ್. ಕಾರ್ಡ್‌ಗಳು ಹೆಚ್ಚಾಗಲು ಕಾರಣಗಳೇನು ;

(ಇ) ಬಡತನ ರೇಖೆಗಿಂತ ಹೆಚ್ಚಿಗೆ ಇರುವ ಜನರಿಗೂ ಬಿ.ಪಿ.ಎಲ್. ಕಾರ್ಡ್‌ಗಳನ್ನು ಹಂಚಿಕೆ ಮಾಡಿರುವುದು ಸರ್ಕಾರದ ಗಮನದಲ್ಲಿದೆಯೇ ; ಈ ರೀತಿ ವ್ಯತ್ಯಾಸವಾಗಿರುವುದನ್ನು ಸರಿಪಡಿಸಲು ಸರ್ಕಾರವು ಯಾವ ಕ್ರಮ ಕೈಗೊಂಡಿದೆ ?

## ನ್ಯಾಯಬೆಲೆ ಅಂಗಡಿಯಲ್ಲಿ ವಿತರಿಸುವಾಗ ಆಗುವ ಲೋಪದ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೪ (೧೭೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ನ್ಯಾಯಬೆಲೆ ಅಂಗಡಿಗಳಿಗೆ ಬಿ.ಪಿ.ಎಲ್/ಎ.ಪಿ.ಎಲ್ ಹಾಗೂ ಅಂತ್ಯೋದಯ ಕಾರ್ಡುದಾರರಿಗೆ ವಿತರಿಸುವ ಪಡಿತರ

ಅಕ್ಕಿ ಹಾಗೂ ಇತರೆ ದಿನಸಿ ಪದಾರ್ಥಗಳು ಸಂಪೂರ್ಣವಾಗಿ ಫಲಾನುಭವಿಗಳಿಗೆ ತಲುಪದೆ ಅಕ್ರಮ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಕ್ರಮ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ಹಾಗೂ ಕಳೆದ ಎರಡು ವರ್ಷಗಳ ಅವಧಿಯಲ್ಲಿ ಸಂಭವಿಸಿದ ದುರುಪಯೋಗದ ಪ್ರಕರಣಗಳೆಷ್ಟು;

(ಇ) ಅಕ್ರಮಗಳಲ್ಲಿ ಭಾಗಿಯಾದ ಅಧಿಕಾರಿ ಹಾಗೂ ಸಿಬ್ಬಂದಿಗಳ ವಿರುದ್ಧ ಸರ್ಕಾರ ಯಾವ ಶಿಸ್ತಿನ ಕ್ರಮ ಕೈಗೊಂಡಿದೆ ;

(ಈ) ಪ್ರತೀ ಕಾರ್ಡುದಾರರಿಗೆ ವಿವಿಧ ಯೋಜನೆಯಡಿಯಲ್ಲಿ ವಿತರಿಸುತ್ತಿರುವ ಧಾನ್ಯಗಳ ಪ್ರಮಾಣ ಹಾಗೂ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ವಿವರ ನೀಡುವುದು)

## ಕೊಳಗೇರಿ ಪ್ರದೇಶದಲ್ಲಿ ವಾಸಿಸುವ ಯುವಕ/ಯುವತಿಯರಿಗೆ ವಿಶೇಷ ತರಬೇತಿ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೫೫ (೧೭೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಳಗೇರಿ ಯುವಕರ ಜೀವನ ರೂಪಿಸುವ ನಿಟ್ಟಿನಲ್ಲಿ ಅಲ್ಲಿನ ಯುವಕ ಯುವತಿಯರಿಗೆ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಭಾಗವಹಿಸಲು ತರಬೇತಿ ಶಿಕ್ಷಣ ಕೊಡುವ ಬಗ್ಗೆ ಸರ್ಕಾರದ ನಿಲುವೇನು ;

(ಆ) ಕೊಳಗೇರಿ ಯುವಕ ಯುವತಿಯರಿಗೆ ಉನ್ನತ ವ್ಯಾಸಂಗ ಮಾಡಲು ವಿಶೇಷ ತರಬೇತಿಯನ್ನು ನೀಡುವ ಯಾವ ಯಾವ ಯೋಜನೆಗಳಿವೆ ; (ವಿವರ ಒದಗಿಸುವುದು)

(ಇ) ಕೊಳಗೇರಿ ಅಭಿವೃದ್ಧಿ ಸಂಸ್ಥೆಯ ಮುಖಾಂತರ ಯುವಕ ಯುವತಿಯರಿಗೆ ಕೆ.ಎ.ಎಸ್. ಮತ್ತು ಐ.ಎ.ಎಸ್. ಉದ್ಯೋಗ ಪಡೆಯುವ ನಿಟ್ಟಿನಲ್ಲಿ ತರಬೇತಿ ನೀಡಲಾಗುತ್ತಿದೆಯೇ ;

(ಈ) ನೀಡುತ್ತಿದ್ದಲ್ಲಿ, ತರಬೇತಿ ಆಯ್ಕೆಗೆ ಯಾವ ಮಾನದಂಡವನ್ನು ರೂಪಿಸಲಾಗಿದೆ ; ಹಾಗೂ ಯಾವ ಸಂಸ್ಥೆಗೆ ನೀಡಲಾಗಿದೆ ;

(ಉ) ತರಬೇತಿ ಪಡೆಯಲು ನಿಗದಿಪಡಿಸಿರುವ ಅನುದಾನವೆಷ್ಟು ; ಈವರೆಗೆ ತರಬೇತಿ ಪಡೆದ ಫಲಾನುಭವಿಗಳ ಸಂಪೂರ್ಣ ವಿವರ ನೀಡುವುದು ?

## ರೇಷ್ಮೆ ಬೆಳೆಗಾರರ ಸಂಕಷ್ಟದ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೬ (೧೭೮) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ರೇಷ್ಮೆ ಬೆಳೆಗಾರರು ಅನೇಕ ಸಂಕಷ್ಟಗಳನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಒಂದು ವರ್ಷದಿಂದ ರೇಷ್ಮೆ ಗೂಡಿನ ಬೆಲೆಯು ತೀವ್ರ ಕುಸಿತ ಕಂಡಿದ್ದು, ಬೆಳೆಗಾರರು ಸಂಕಷ್ಟದಲ್ಲಿದ್ದು, ಇವರುಗಳಿಗೆ ಸರ್ಕಾರ ಯಾವ ಪರಿಹಾರವನ್ನು ಕಲ್ಪಿಸಿದೆ ;

(ಇ) ರೇಷ್ಮೆ ಗೂಡಿಗೆ ಸರ್ಕಾರವು ಪ್ರೋತ್ಸಾಹಧನವನ್ನು ನೀಡುತ್ತಿದ್ದು, ಅದನ್ನು ಈಗ ರೈತರಿಗೆ ನೀಡುವ ಕುರಿತು ಕ್ರಮ ಕೈಗೊಳ್ಳುವುದೇ;

(ಈ) ಸದರಿ ಇಲಾಖೆಯಲ್ಲಿ ಮಂಜೂರಾದ ಅಧಿಕಾರಿ ಮತ್ತು ಸಿಬ್ಬಂದಿಗಳ ಸಂಖ್ಯೆಯಲ್ಲಿ ಅರ್ಧದಷ್ಟು ಹುದ್ದೆಗಳು ಖಾಲಿ ಇದ್ದು, ರೈತರಿಗೆ ತಾಂತ್ರಿಕತೆ ಹಾಗೂ ಸಹಾಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಸದರಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಉ) ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ರಾಜ್ಯದಲ್ಲಿ ವಿತರಣೆಯಾಗುತ್ತಿರುವ ಕಲಬೆರಿಕೆ ಪೆಟ್ರೋಲಿಯಂ ಉತ್ಪನ್ನಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೭ (೧೭೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪೆಟ್ರೋಲಿಯಂ ಉತ್ಪನ್ನಗಳು ಇತ್ತೀಚೆಗೆ ಕಲಬೆರಿಕೆಯಿಂದ ವಿತರಣೆಯಾಗುತ್ತಿರುವುದಾಗಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ಪೆಟ್ರೋಲಿಯಂ ಉತ್ಪನ್ನಗಳ ವಿತರಣೆಯಲ್ಲಿ ಕಲಬೆರಿಕೆಗೆ ಸಂಬಂಧಿಸಿದಂತೆ ಎಷ್ಟು ಪ್ರಕರಣಗಳು ದಾಖಲಾಗಿವೆ (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ದಾಖಲಾದ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ; ವಿಧಿಸಿದ ಶಿಕ್ಷೆ ಬಗ್ಗೆ ವಿವರ ನೀಡುವುದು;

(ಈ) ಈ ಕಲಬೆರಿಕೆ ಅವ್ಯವಸ್ಥೆಯನ್ನು ನಿಲ್ಲಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ದ್ರಾಕ್ಷಿ ಬೆಳೆಗಾರರ ಸಮಸ್ಯೆ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೫೮ (೧೮೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉತ್ತರ ಕರ್ನಾಟಕದ ತೋಟಗಾರಿಕೆ ಮುಖ್ಯ ಬೆಳೆಯಾದ ದ್ರಾಕ್ಷಿ ಬೆಳೆಗಾರರು ಪ್ರತಿ ವರ್ಷ ಬೆಳೆದ ಉತ್ಪನ್ನಗಳಿಗೆ ನ್ಯಾಯ ಸಮ್ಮತ ಬೆಲೆ ಸಿಗದೆ ಸಮಸ್ಯೆ ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಟ್ಟು ಎಷ್ಟು ಜಮೀನಿನಲ್ಲಿ ಎಷ್ಟು ಪ್ರಮಾಣದ ದ್ರಾಕ್ಷಿಯನ್ನು ಉತ್ಪಾದಿಸಲಾಗುತ್ತಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಪ್ರತಿ ವರ್ಷ ಎಷ್ಟು ಹೆಕ್ಟೇರ್ ಜಮೀನಿನಲ್ಲಿ ದ್ರಾಕ್ಷಿ ಬೆಳೆ ಬೆಳೆಯಲಾಗುತ್ತದೆ ;

(ಈ) ದ್ರಾಕ್ಷಿ ಹಣ್ಣನ್ನು ರಫ್ತು ಮಾಡುವುದರ ಮುಖಾಂತರ ರೈತರಿಗೆ ಯೋಗ್ಯ ಬೆಲೆ ದೊರಕಿಸಿಕೊಡುವುದರೊಂದಿಗೆ ವಿದೇಶಿ ವಿನಿಮಯದಲ್ಲಿ ಗಳಿಕೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿ ಅಕ್ರಮ/ಅನಧಿಕೃತ ಕಟ್ಟಡ ನಿರ್ಮಾಣವಾಗುತ್ತಿರುವ ಬಗ್ಗೆ

**ಶ್ರೀ ಲಹರ್ ಸಿಂಗ್ ಸಿರೋಯಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೫೯ (೧೪೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಕ್ರಮ ಹಾಗೂ ಅನಧಿಕೃತ ಕಟ್ಟಡಗಳ ನಿರ್ಮಾಣ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಕ್ರಮ ಹಾಗೂ ಅನಧಿಕೃತ ಕಟ್ಟಡಗಳ ನಿರ್ಮಾಣದ

ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ? (ವಿವರ ಒದಗಿಸುವುದು)

## ನಕಲಿ ದಾಖಲಾತಿ ಸೃಷ್ಟಿಸಿ ಗಣಿಗಾರಿಕೆ ನಿರ್ಮಿಸಿರುವ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೬೦ (೧೮೬) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಾರ್ಚ್, ೨೦೧೮ಕ್ಕೆ ಕೊನೆಗೊಂಡ ಆರ್ಥಿಕ ವರ್ಷಕ್ಕೆ ಸಂಬಂಧಿಸಿದ ಸಿಎಜಿ ವರದಿಯಲ್ಲಿ ಅಕ್ರಮ ಗಣಿಗಾರಿಕೆಯಿಂದ ನಕಲಿ ದಾಖಲೆ ಸೃಷ್ಟಿಸಿ ಗಣಿಗಾರಿಕೆ ಮಾಡುತ್ತಿರುವುದರಿಂದ ಹಾಗೂ ವ್ಯಾಪ್ತಿ ಮೀರಿದ ಗಣಿಗಾರಿಕೆಯಿಂದ ಸರ್ಕಾರದ ಬೊಕ್ಕಸಕ್ಕೆ ರೂ. ೧೯೧.೯೩ ಕೋಟಿ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಅಕ್ರಮ ಗಣಿಕಾರಿಕೆ, ನಕಲಿ ದಾಖಲೆ ಸೃಷ್ಟಿಸಿ ಗಣಿಗಾರಿಕೆ ಹಾಗೂ ವ್ಯಾಪ್ತಿ ಮೀರಿದ ಗಣಿಗಾರಿಕೆ ಮಾಡುತ್ತಿರುವ ಬಗ್ಗೆ ಸಂಬಂಧಿತ ಅಧಿಕಾರಿಗಳಿಗೆ ತಿಳಿದಿರಲಿಲ್ಲವೇ; ಇಲ್ಲವೆಂದಾದಲ್ಲಿ ಅಂತಹ ಅಧಿಕಾರಿಗಳು ಕರ್ತವ್ಯ ಲೋಪವೆಸಗಿ ಸರ್ಕಾರಕ್ಕೆ ನಷ್ಟ ಉಂಟು ಮಾಡಿರುವ ಬಗ್ಗೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಅಕ್ರಮವೆಸಗಲು ಸಹಾಯ ಮಾಡಿದ ಎಷ್ಟು ಅಧಿಕಾರಿಗಳನ್ನು ಅಮಾನತ್ತು ಮಾಡಲಾಗಿದೆ ?

## ನಗರಗಳ ಮೂಲ ಸೌಕರ್ಯ ಅಭಿವೃದ್ಧಿ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೧ (೧೮೭) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೨ ವರ್ಷಗಳಲ್ಲಿ ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿಯ ಹೆಸರಿನಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಕರ್ನಾಟಕ ನಗರ ಮೂಲ ಸೌಕರ್ಯ ಅಭಿವೃದ್ಧಿಯ ಅನ್ವಯ ಎಷ್ಟು ನಗರಗಳ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗಿದೆ ; ಎಷ್ಟು ಕಿ.ಮೀ. ರಸ್ತೆ ನಿರ್ಮಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ಜಲ್ಲಿ ಕ್ರಷರ್‌ಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೨ (೧೮೮) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಜಲ್ಲಿ ಕ್ರಷರ್‌ಗಳ ಮಾಲೀಕರಿಂದ ಸರ್ಕಾರಕ್ಕೆ ಕಳೆದ ಎರಡು ವರ್ಷಗಳಿಂದ ಬರಬೇಕಾಗಿರುವ ಬಾಕಿ ರಾಯಧನವೆಷ್ಟು ; ಈ ಬಾಕಿ ರಾಯಧನ ವಸೂಲು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಆ) ಮುಟ್ಟಗೋಲು ಹಾಕಿದ ಜಲ್ಲಿಕಲ್ಲು ಮತ್ತು ಇತರ ಖನಿಜಗಳ ಮೊತ್ತವೆಷ್ಟು ; ಪ್ರಸ್ತುತ ಈ ಮುಟ್ಟಗೋಲು ಹಾಕಿದ ಜಲ್ಲಿಕಲ್ಲುಗಳನ್ನು ಯಾವ ರೀತಿ ವಿಲೇ ಮಾಡಲಾಗಿದೆ ; ಇವುಗಳ ಮಾರಾಟದಿಂದ ಬಾಕಿ ಇರುವ ರಾಯಧನವನ್ನು ವಸೂಲು ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಯಾವ ಯಾವ ಕ್ರಷರ್‌ನಲ್ಲಿ ಎಷ್ಟೆಷ್ಟು ಜಲ್ಲಿಕಲ್ಲುಗಳ ದಾಸ್ತಾನಿದೆ; ಕ್ರಷರ್ ಘಟಕಗಳ ಸ್ಥಿತಿಗತಿ ಬಗ್ಗೆ ದ್ರೋಣ್ ಸರ್ವೆ ನಡೆಸಲಾಗಿದೆಯೇ ; ಇಲ್ಲವಾದಲ್ಲಿ, ಯಾವಾಗ ನಡೆಸಲಾಗುವುದು?

## ಧಾರ್ಮಿಕ ಕೈಗಾರಿಕೆ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೩ (೧೮೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಧಾರ್ಮಿಕ ಕೈಗಾರಿಕೆ ಎಂದರೇನು ; ರಾಜ್ಯದಲ್ಲಿ ಇದುವರೆಗೆ ಧಾರ್ಮಿಕ ಕೈಗಾರಿಕೆಗೆಂದು ಎಷ್ಟು ಎಕರೆ ಭೂಮಿಯನ್ನು ಕೆ.ಐ.ಡಿ.ಬಿ. ಮುಖಾಂತರ ಉದ್ಯಮಿಗಳಿಗೆ ಗುತ್ತಿಗೆ/ಮಾರಾಟದ ಮೂಲಕ ವಿತರಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಯಾವ ಉದ್ದೇಶಕ್ಕೆ ಕೆ.ಐ.ಡಿ.ಬಿ. ಮುಖಾಂತರ ಉದ್ಯಮಿಗಳಿಗೆ ಗುತ್ತಿಗೆ/ಮಾರಾಟದ ಮೂಲಕ ವಿತರಿಸಲಾಗಿದೆಯೋ ಆ ಉದ್ದೇಶಕ್ಕೆ ಬಳಸಿಕೊಳ್ಳದ ಎಷ್ಟು ಎಕರೆ ಭೂಮಿಯನ್ನು ಕೆ.ಐ.ಡಿ.ಬಿ. ಹಿಂದಕ್ಕೆ ಪಡೆದುಕೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಂಗಳೂರು ದಕ್ಷಿಣ ತಾಲ್ಲೂಕು ಉತ್ತರಹಳ್ಳಿ ಹೋಬಳಿ ದೊಡ್ಡಕಲ್ಲಸಂದ್ರ ಗ್ರಾಮದ ಸರ್ವೇ ನಂ. ೫೫/೧ (ಪಿ). ೫೫/೨ (ಪಿ), ೫೬,೫೭,೫೮,೫೯ (ಪಿ) ಮತ್ತು ೬೦(ಪಿ) ಯಲ್ಲಿನ ೨೪ ಎಕರೆ ಜಾಗವನ್ನು ಯಾವ ಉದ್ದೇಶಕ್ಕಾಗಿ ಯಾರಿಗೆ ಕೆ.ಐ.ಡಿ.ಬಿ. ಮುಖಾಂತರ ವಿತರಿಸಲಾಗಿತ್ತು ;

(ಈ) ಪ್ರಸ್ತುತ ಆ ಜಾಗದಲ್ಲಿ ಯಾವ ಕೈಗಾರಿಕೆ ಪ್ರಾರಂಭಗೊಂಡಿದೆ ; ಇದರಿಂದ ಎಷ್ಟು ಕನ್ನಡಿಗರಿಗೆ ಉದ್ಯೋಗ ದೊರೆತಿದೆ ; ಈ ಕೈಗಾರಿಕೆಯ ಉತ್ಪನ್ನಗಳಾವುವು ;

(ಉ) ಸದರಿ ಜಾಗವನ್ನು ಯಾವ ಉದ್ದೇಶಕ್ಕಾಗಿ ನೀಡಲಾಗಿತ್ತೋ ಆ ಉದ್ದೇಶಕ್ಕೆ ಬಳಸಿಕೊಳ್ಳದಿದ್ದಲ್ಲಿ ಸದರಿ ಜಾಗವನ್ನು ಕೆ.ಐ.ಡಿ.ಬಿ. ಹಿಂದಕ್ಕೆ ಪಡೆದುಕೊಳ್ಳಲು ಯಾವ ಕ್ರಮ ಕೈಗೊಂಡಿದೆ ; ಈ ಕುರಿತು ಯಾವಾಗ ನೋಟಿಸ್ ನೀಡಲಾಗಿದೆ ?

## ರಾಜ್ಯದಲ್ಲಿನ ಸ್ಥಳೀಯ ಸಂಸ್ಥೆಗಳ ಕುರಿತು

**ಶ್ರೀ ಪಿ.ಆರ್.ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೬೪ (೧೯೦) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ Large Urban Areas & Small Urban Areas ಒಟ್ಟು ಸ್ಥಳೀಯ ಸಂಸ್ಥೆಗಳ ಸಂಖ್ಯೆ ಎಷ್ಟಿದೆ ; ಈ ಎಲ್ಲಾ ಸ್ಥಳೀಯು ಸಂಸ್ಥೆಗಳು ಸಂವಿಧಾನಾತ್ಮಕವಾಗಿ ಕಾರ್ಯನಿರ್ವಹಿಸುತ್ತಿವೆಯೇ; ನಿರ್ವಹಿಸುತ್ತಿದ್ದಲ್ಲಿ ಮಾಹಿತಿ ನೀಡುವುದು ;

(ಆ) ಎಲ್ಲಾ ಸ್ಥಳೀಯು ಸಂಸ್ಥೆಗಳಲ್ಲಿ ವಾರ್ಡ್ ಕಮಿಟಿಗಳು ರಚನೆಯಾಗಿವೆಯೇ ; ಹಾಗಿದ್ದಲ್ಲಿ, ವಿವರಗಳನ್ನು ನೀಡುವುದು;

(ಇ) ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಒಳಚರಂಡಿ ವ್ಯವಸ್ಥೆ ಇದೆಯೇ ; ಇದ್ದಲ್ಲಿ, ಎಷ್ಟು ಸ್ಥಳೀಯ ಸಂಸ್ಥೆಗಳಿಗೆ ಎಸ್‌ಟಿಪಿ (ಶುದ್ಧೀಕರಣ ಘಟಕಗಳು) ಇವೆ ; ಇದ್ದಲ್ಲಿ, ಸಂಪೂರ್ಣ ಮಾಹಿತಿ ನೀಡುವುದು ;

(ಈ) ರಾಜ್ಯದ ಎಲ್ಲಾ ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಮೂಲಗಳ ಬಗ್ಗೆ ಮಾಹಿತಿ ನೀಡುವುದು ;

(ಉ) ಎಷ್ಟು ಸ್ಥಳೀಯ ಸಂಸ್ಥೆಗಳಲ್ಲಿ ಕುಡಿಯುವ ನೀರಿನ ಶುದ್ಧೀಕರಣ ಘಟಕ ಹೊಂದಿರುತ್ತದೆ. (ಆರ್.ಓ.ಪ್ಲಾಂಟ್) ಇದರ ಬಗ್ಗೆ ಸಂಪೂರ್ಣ ಮಾಹಿತಿ ನೀಡುವುದು ?

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O-212/400 ಪ್ರತಿಗಳು/26–02–2020